
ವಿಜಯಪುರ | ಸಂಪುಟ 02 | ಸಂಚಿಕೆ 82 | ಪುಟ 4 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ
ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur
editor.udayarashmi@gmail.com
RNI NO: KARKAN/2023/86203
ಶನಿವಾರ, ಮೇ 18, 2024




“ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಹಾಡುಹಗಲೇ ಅಮಾಯಕ ಹೆಣ್ಣು ಮಕ್ಕಳನ್ನು ಬರ್ಬರವಾಗಿ ಹತ್ಯೆಗೈಯಲಾಗುತ್ತಿದೆ. ಮನೆಗಳಿಗೇ ನುಗ್ಗಿ ಗೃಹ ಲಕ್ಷ್ಮಿಯರನ್ನು ಚಾಕುವಿನಿಂದ ಇರಿದು ಕೊಲ್ಲಲಾಗುತ್ತಿದೆ, ಭಾಗ್ಯಲಕ್ಷ್ಮಿಯರನ್ನು ಕಳೆದುಕೊಂಡ ಹೆತ್ತವರ ಆಕ್ರಂದನ ಅರಣ್ಯರೋಧನವಾಗುತ್ತಿದೆ.”

– ಬಿ.ವೈ.ವಿಜಯೇಂದ್ರ
ಬಿಜೆಪಿ ರಾಜ್ಯಾಧ್ಯಕ್ಷರು

**ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಮಹತ್ವದ ಟ್ವಿಸ್ಟ್ । ಅರವಿಂದ್ ಕೇಜ್ರಿವಾಲ್ ಅವರಿಗೆ ಮತ್ತೊಂದು ಸಂಕಷ್ಟ**

# ಇಡೀ ‘ಆಮ್ ಆದ್ಮಿ ಪಕ್ಷ’ವನ್ನೇ ಆರೋಪಿಯಾಗಿಸಿದ ED

ನವದೆಹಲಿ: ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಮಹತ್ವದ ಟ್ವಿಸ್ಟ್ ನೀಡಿರುವ ಜಾರಿ ನಿರ್ದೇಶನಾಲಯ (ಇಟಿಜಿಂಡಿಥಿಜಟಜಟಣ ಆಡಿಜಛಿ–ಣಂಡಿಚಿಣಜ) ಇದೀಗ ತಾನು ಸಲ್ಲಿಸಿರುವ




8ನೇ ಆರೋಪ ಪಟ್ಟಿಯಲ್ಲಿ ಇಡೀ ಆಮ್ ಆದ್ಮಿ ಪಕ್ಷವನ್ನೇ ಆರೋಪಿಯನ್ನಾಗಿಸಿದೆ.

ಹೌದು. ದೆಹಲಿಯಲ್ಲಿ ಅಬಕಾರಿ ನೀತಿ ಜಾರಿ ವೇಳೆ ಹಗರಣ ನಡೆದಿದೆ ಎನ್ನಲಾದ ಪ್ರಕರಣದಲ್ಲಿ ಜೈಲು ಪಾಲಾಗಿ, ಮಧ್ಯಂತರ ಜಾಮೀನು ಪಡೆದು ಹೊರಬಂದಿರುವ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಮತ್ತೊಂದು ಸಂಕಷ್ಟ ಎದುರಾಗಿದೆ.




ಜಾರಿ ನಿರ್ದೇಶನಾಲಯವು ರೋಸ್ ಅವೆನ್ಯೂ ಕೋರ್ಟ್‌ಗೆ ಇಂದು ಪೂರಕ ಚಾರ್ಜ್‌ಶೀಟ್ ಸಲ್ಲಿಸಿದ್ದು, ಅಬಕಾರಿ ನೀತಿ ಹಗರಣದಲ್ಲಿ ಅರವಿಂದ್ ಕೇಜ್ರಿವಾಲ್ ಹಾಗೂ ಇಡೀ ಆಮ್ ಆದ್ಮಿ ಪಕ್ಷವನ್ನು ಆರೋಪಿಗಳು ಎಂದು ಪ್ರಸ್ತಾಪಿಸಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ 8ನೇ ಚಾರ್ಜ್‌ಶೀಟ್ ಸಲ್ಲಿಸಿರುವ ಇ.ಡಿ, “ಮದ್ಯ ಮಾರಾಟಗಾರರರಿಗೆ ಅನುಕೂಲವಾಗಲಿ ಎಂಬ ದಿಸೆಯಲ್ಲಿ ಅರವಿಂದ್ ಕೇಜ್ರಿವಾಲ್,

## ಮತ್ತೆ ಕೇಜ್ರಿವಾಲ್ ಗೆ ಸಂಕಷ್ಟ

ಅರವಿಂದ್ ಕೇಜ್ರಿವಾಲ್ ಹಾಗೂ ಆಪ್‌ಅನ್ನು ಆರೋಪಿಗಳನ್ನಾಗಿ ಚಾರ್ಜ್‌ಶೀಟ್‌ನಲ್ಲಿ ಪ್ರಸ್ತಾಪಿಸಿದ ಕಾರಣ ಮುಂದಿನ ದಿನಗಳಲ್ಲಿ ಕೇಜ್ರಿವಾಲ್ ಅವರಿಗೆ ಇನ್ನಷ್ಟು ಸಂಕಷ್ಟ ಎದುರಾಗಲಿದೆ ಎಂದು ಹೇಳಲಾಗುತ್ತಿದೆ. ಮತ್ತೊಂದೆಡೆ, ಇ.ಡಿ ಬಂಧನ ಪ್ರಶ್ನಿಸಿ ಅರವಿಂದ್ ಕೇಜ್ರಿವಾಲ್ ಅವರು ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ತೀರ್ಪನ್ನು ಕಾಯ್ದಿರಿಸಿದೆ.


ಇನ್ನು ದೆಹಲಿ ಸಿಎಂ ಹಾಗೂ ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಪ್ರಧಾನ ಆರೋಪಿಯಾಗಿರುವ ಈ ಅಬಕಾರಿ ಹಗರಣದಲ್ಲಿ ಈ ವರೆಗೂ ಒಟ್ಟು 18 ಮಂದಿಯನ್ನು ಬಂಧಿಸಲಾಗಿದೆ. ಈ ಪೈಕಿ ಇತ್ತೀಚೆಗಷ್ಟೇ ಅರವಿಂದ್ ಕೇಜ್ರಿವಾಲ್ ಜಾಮಿನಿನ ಮೇಲೆ ಬಿಡುಗಡೆಯಾಗಿದ್ದರು. ಮಾಜಿ ಉಪ ಮುಖ್ಯಮಂತ್ರಿ ಮನೀಶ್ ಸಿಸೋಡಿಯಾ ಇನ್ನು ವಿಚಾರಣಾಧೀನ ಕೈದಿಯಾಗಿದ್ದಾರೆ.

ಮನೀಶ್ ಸಿಸೋಡಿಯಾ ಸೇರಿ ಹಲವು ನಾಯಕರು ನೀತಿ ರೂಪಿಸಿದ್ದಾರೆ. ದಕ್ಷಿಣ ಭಾರತದ ಹಲವು ವ್ಯಕ್ತಿಗಳು ಇದರ ಲಾಭ ಪಡೆದಿದ್ದಾರೆ. ಲಾಭದ ಸ್ವಲ್ಪ ಮೊತ್ತವನ್ನು ಆಪ್‌ಗೆ ನೀಡಲಾಗಿದೆ. ಆ ಮೊತ್ತವನ್ನು ಗೋವಾ ಚುನಾವಣೆಗೆ ಬಳಸಲಾಗಿದೆ” ಎಂದು ಇ.ಡಿ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಿದೆ.

**ರಾಜ ನುಡಿ**

ಅಸಲಿಗಿಂತ ಬಡ್ಡಿಯ ಮೇಲೆ ಮನುಷ್ಯನಿಗೆ ಒಲವು ಹೆಚ್ಚಂತೆ. ಹಾಗೆಯೇ ಅಜ್ಜ–ಅಜ್ಜಿಗೆ ಮಕ್ಕಳಿಗಿಂತ ಮೊಮ್ಮಕ್ಕಳ ಮೇಲೆ ಪ್ರೀತಿ ಜಾಸ್ತಿ. ಪ್ರೀತಿಗೆ ಮೇಲ್ಮುಖಕ್ಕಿಂತ ಇಳಿಮುಖ ಹರಿವಿನ ಪ್ರಮಾಣ ಹೆಚ್ಚು.

–ಡಾ. ರಾಜಶೇಖರ ನಾಗೂರ



**ವಚನ ಚಿಂತನ 381**

*ನಿಂದೆ ಸ್ತುತಿಗಳಿಗೆ ಕಿವುಡನಾಗಿರಬೇಕು.*
*ಪರನಾರಿ ದ್ರವ್ಯಕ್ಕೆ ಅಂಧಕನಾಗಿರಬೇಕು.*
*ಶಬ್ದ ಸಂಭ್ರಮದ ತಾರ್ಕಿಕರೊಡನೆ*
*ಮೂಗಿಯ ಕೋಗಿಲೆಯಂತೆ*
*ಮೂಗನಾಗಿರಬೇಕು.*
*ಇವನಳಿದ ಶರಣರ ಹೃತ್ಕಮಲದೊಳಗೆತಾನು*
*ತಾನಾಗಿಹ ತ್ರೈಲೋಚನ ಮನೋಹರ*
*ಮಾಣಿಕೇಶ್ವರಲಿಂಗನು.*

ತ್ರೈಲೋಚನ ಮನೋಹರ ಮಾಣಿಕೇಶ್ವರಲಿಂಗ ಎಂಬ ವಚನಾಂಕಿತದ ಅಜ್ಞಾತ ವಚನಕಾರರು ಈ ವಚನದಲ್ಲಿ ಶರಣನು ಹೇಗಿರಬೇಕು ಎಂಬುದನ್ನು ವಿವರಿಸುತ್ತಾ ಮಾನಸಿಕ ಸ್ಥಿತಪ್ರಜ್ಞೆ ಕಾಯ್ದುಕೊಳ್ಳಲು ಸೂಚಿಸಿದ್ದಾರೆ. ವಚನದ ಪ್ರಾರಂಭದ ಸಾಲಿ ನಲ್ಲಿ ಸ್ತುತಿ–ನಿಂದೆಗಳಿಗೆ ಕಿವುಡನಾಗಿರಬೇಕು ಎಂಬುದು ಹೊಗಳಿಕೆ ತೆಗಳಿಕೆಗೆ ಕಿವಿ ಕೊಡುವುದ–ರಿಂದ ಸಾಧಿಸಬೇಕಾದ ಕಾರ್ಯಗಳಿಗೆ ಇವುಗಳು ತೊಂದರೆಯನ್ನು ಉಂಟು ಮಾಡುತ್ತವೆ.ಎಂಬುದನ್ನು ತಿಳಿಸಿದ್ದಾರೆ. ಅಕ್ಕಮಹಾದೇವಿಯವರು ಸಹ ತಮ್ಮ ಒಂದು ವಚನ ದಲ್ಲಿ ಸ್ತುತಿ ನಿಂದೆಗಳು ಬಂದರೆ ಮನದಲ್ಲಿ ಕೋಪವ ತಾಳದೆ ಸಮಾಧಾನಿಯಾಗಿರಬೇಕು ಎಂದು ಸೂಚಿಸಿದ್ದಾರೆ. ಮನಸ್ಸನ್ನು ಚಂಚಲಪಡಿಸುವ ಮತ್ತಷ್ಟು ಅಂಶಗಳೆಂದರೆ ಪರನಾರಿ ಮತ್ತು ಪರದ್ರವ್ಯ ,ಇವುಗಳ ಬಗ್ಗೆ ಅಂಧಕನಾಗಿರಬೇಕು ಎನ್ನುವುದು ಅವುಗಳನ್ನು ಮನಸ್ಸಿನಲ್ಲಿಯೂ ಸಹ ಬಯಸದಂತೆ ಮನೋನಿ ಗ್ರಹ ಪಡಿಸಿಕೊಳ್ಳಲು ತಿಳಿಸಿದ್ದಾರೆ. ಮುಂದುವ–ರಿದು ಮಾತಿನ ಮೊಡಿಯಲ್ಲಿ ಮರಳು ಮಾಡುತ್ತ ಶಬ್ದ ಜಾಲದಲ್ಲಿ ಗೆದ್ದೆನೆಂದು ಬೀಗುವವರೆದರು ಮೂಗನಾಗಿರಬೇಕು. ಹೇಗೆಂದರೆ ಎದುರಿನ ಪಕ್ಷಿಯು ಕರ್ಕಶವಾಗಿ ಹಾಡುತ್ತಿದ್ದರು ಅದಕ್ಕಿಂತಲೂ ಇಂಪಾದ ಧ್ವನಿಯನ್ನು ಹೊರಹೊಮ್ಮಿಸಲು ತನ್ನಿಂದಸಾಧ್ಯವೆಂದು ಗೊತ್ತಿದ್ದ ರೂ ಸಹ ಮಾಗಿಯ ಕೋಗಿಲೆ ಅವಕಾಶಕ್ಕಾಗಿ ಕಾಯುತ್ತಾ ಹೇಗೆ ಮೌನವಾಗಿರುತ್ತದೆಯೋ ಹಾಗಿರಬೇಕು ಎಂದಿರುವರು. ಮೋಳಿಗೆ ಮಾರಯ್ಯನವರು ಇದೇ ಭಾವದಲ್ಲಿ “ಪರಬ್ರಹ್ಮವ ನುಡಿಯುತ್ತ, ಪರದ್ರವ್ಯವ ಕೈಯಾಂತು ಬೇಡುತ್ತ, ಮಾತಿನಲ್ಲಿ ಶೂನ್ಯತನ, ಮನ ದಲ್ಲಿ ಆಶೆಯೆಂಬ ತೊರೆ ಹಾಯಬಾರದೆ ಹರಿವುತ್ತಿದೆ. ಮತ್ತೆಂತ ಯ್ಯ ಪರಬ್ರಹ್ಮದ ಮಾತು ? ಇದು ಎನಗೆ ಹೇಸಿಕೆಯಾಯಿತ್ತು, ನಿಃಕಳಂಕ ಮಲ್ಲಿಕಾರ್ಜುನಾ.” ಎಂದಿದ್ದಾರೆ. ಇದು ಅಂದಿನ ವಚನ ಕಾರರು ನೂತನ ಸಮಾಜವನ್ನು ಕಟ್ಟುವಲ್ಲಿ ಅವರು ತೋರಿದ ಕಾಳಜಿಯನ್ನು ವ್ಯಕ್ತಪಡಿಸುತ್ತದೆ.ಇಂದಿಗೂ ಇದು ಸತ್ಯವಾಗಿದೆ..

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಕಾಲುವೆಯ ಕೊನೆಯ ಭಾಗದವರೆಗೆ ನೀರು :ಗಡಬಳ್ಳಿ

ಉದಯರಶ್ಮಿ ನ್ಯೂಸ್

ಇಂಡಿ: ಕೃಷ್ಣಾ ಮುಖ್ಯ ಕಾಲುವೆಯಿಂದ ಕಾಲುವೆಯ ಕೊನೆಯ ಭಾಗದ ವರೆಗೆ ನೀರು ಹರಿಸಲಾಗಿದೆ ಎಂದು ಕೃಷ್ಣಾ ಭಾಗ್ಯ ಜಲ ನಿಗಮದ ಅಧೀಕ್ಷಕ ಅಭಿಯಂತರ ಮನೋಜಕುಮಾರ ಗಡಬಳ್ಳಿ ತಿಳಿಸಿದ್ದಾರೆ.

ಕಳೆದ ಬಾರಿ ಕೃಷ್ಣಾ ಮುಖ್ಯ ಕಾಲುವೆಯಿಂದ 135 ಕಿ.ಮಿ ಮಾತ್ರ ನೀರು ಹರಿಯಬಿಡಲಾಗಿತ್ತು. ಇದ–ರಿಂದ ಆ ಭಾಗದ ಜನರು ಸತ್ಯಾಗ್ರಹ ಮಾಡಿದ್ದರು ಎಂದರು.

ಕೆಂಬಾವಿಯ 0 ಕಿ.ಮಿಯಿಂದ ಸಿಂದಗಿ ತಾಲೂಕಿನ ಬಳಗಾನೂರ ಕೆರೆಯ ವರೆಗೆ ನಂತರ ಬಳಗಾನೂರ ಕೆರೆಯಿಂದ ಇಂಡಿ ತಾಲೂಕಿನಿಂದ ಚಡಚಣ ತಾಲೂಕಿನ ದಸೂರ ವರೆಗೆ ನೀರು ಹರಿಸಿದ್ದು ಆ



ನೀರು ನಂತರ ಭೀಮಾ ನದಿ ಸೇರುತ್ತದೆ ಎಂದರು.

ಇದರಿಂದ ಸಿಂದಗಿ,ಇಂಡಿ ಮತ್ತು ಚಡಚಣ ತಾಲೂಕಿನ ಎಲ್ಲ ಕೆರೆ ತುಂಬಿಸುವದರ ಜೊತೆಗೆ ಜನ ಜಾನುವಾರುಗಳಿಗೆ ಕುಡಿಯಲು ನೀರು ಅನುಕೂಲ ವಾಗುತ್ತದೆ ಎಂದರು.

ಸಹಾಯಕ ಕಾರ್ಯ ಪಾಲಕ ಅಭಿಯಂತರ ಶ್ರೀಮಂತ ಅಂಗಡಿ, ಜಿ.ಪಂ ಗ್ರಾಮೀಣ ಕುಡಿಯುವ ನೀರು ಸರಬರಾಜು ಎಇಇ ಆರ್.ಎಸ್.ರುದ್ರವಾಡಿ,ಸಾಜಿದ ನಲವತ್ತವಾಡ, ಮಲ್ಲಿಕಾರ್ಜುನ ತೆಲಂಗಿ, ಸಾದಿಕ ಹೊನ್ನುಟಗಿ ಮತ್ತಿತರಿದ್ದರು.

## ಅಂಜಲಿ ಹತ್ಯೆ ಖಂಡಿಸಿ ತಳವಾರ ಪರಿವಾರ ಹಿತರಕ್ಷಣಾ ಸಮಿತಿ ಪ್ರತಿಭಟನೆ

ಉದಯರಶ್ಮಿ ನ್ಯೂಸ್

ಸಿಂದಗಿ: ಹುಬ್ಬಳ್ಳಿಯಲ್ಲಿ ನಡೆದ ಅಂಜಲಿ ಅಂಬಿಗೇರ ಕೊಲೆಯನ್ನು ಖಂಡಿಸಿ ಸಿಂದಗಿ ತಹಶಿಲ್ದಾರ ಕಚೇ–ರಿಯ ಮುಂದೆ ವಿಜಯಪುರ ತಳವಾರ ಪರಿವಾರ ಹಿತರಕ್ಷಣಾ ಸಮಿತಿ ವತಿಯಿಂದ ಶುಕ್ರವಾರ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರನ್ನು ಉದ್ದೇಶಿಸಿ ಮಾತನಾಡಿದ ಹೋರಾಟಗಾರ ಶಿವಾಜಿ ಮೆಟಗಾರ, ಅಂಜಲಿ ಅಂಬಿಗೇರ ಹತ್ಯೆ ಮಾಡಿದ ದುಷ್ಕರ್ಮಿಗೆ ಉಗ್ರವಾದ ಶಿಕ್ಷೆಯನ್ನು ವಿಧಿಸಿ ಇಂತಹ ಘಟನೆಗಳು ರಾಜ್ಯದಲ್ಲಿ ಮತ್ತೆ ಮರುಕಳಿಸುವಂತಾಗಬಾರದು ಎಂದು ಎಚ್ಚರಿಸಿದರು.

ತಳವಾರ ಸಮಾಜದ ಮುಖಂಡ ಮಡಿವಾಳ ನಾಯ್ಕೋಡಿ ಮಾತನಾಡಿ, ಅಂಜಲಿ ಅಂಬಿಗೇರ ಕುಟುಂಬಕ್ಕೆ ಅವಳೇ ಆಸರೆಯಾಗಿದ್ದು, ತಂದೆ–ತಾಯಿ ಇಲ್ಲದೆ ಅಜ್ಜಿ ಮತ್ತು ಸಹೋದರಿಯೊಂದಿಗೆ ಜೀವನ



ಸಾಗಿಸುತ್ತಿದ್ದಳು. ಮೃತ ಅಂಜಲಿಯ ಕುಟುಂಬಕ್ಕೆ ಸರ್ಕಾರವು ಪರಿಹಾರ ನೀಡಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಿಂದಗಿ ಪುರಸಭೆ ಮಾಜಿ ಅಧ್ಯಕ್ಷ, ಹಾಲಿ ಸದಸ್ಯ ಹಣಮಂತ ಸುಣಗಾರ, ಪುರಸಭೆಯ ಸದಸ್ಯರಾದ ಬಸವರಾಜ ಯರನಾಳ, ಗೋಲ್ಲಾಳ ಬಂಕಲಗಿ, ಅನೀಲ ಕಡಕೋಳ, ಸಂತೋಷ ಹರನಾಳ, ಮಲ್ಲು ಕುರಿ, ನಾಗು ತಳವಾರ, ಪರಶುರಾಮ ಕೋಟಾರಗಸ್ತಿ, ವಿಜಯಕುಮಾರ ಯಾಳವಾರ, ಈರಣ್ಣ ಕುರಿ, ರಾಜಕುಮಾರ ನಾಯ್ಕೋಡಿ, ಹಣಮಂತ ಹಿಪ್ಪರಗಿ, ಮಲ್ಲು ನಾಯ್ಕೋಡಿ, ಕುಮಾರ ನಾಯ್ಕೋಡಿ, ಕಂಟೆಪ್ಪ ಚೋರಗಸ್ತಿ, ಅಮೋಗಿ ಜೈನಾಪುರ, ಭೂತಾಳಿ ನಾಯ್ಕೋಡಿ ಸೇರಿದಂತೆ ಅನೇಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ತೆಲಂಗಾಣಕ್ಕೆ ನೀರು ಹರಿಸುವುದನ್ನು ಸ್ಥಗಿತಗೊಳಿಸಲು ರೈತಸಂಘ ಆಗ್ರಹ

ಉದಯರಶ್ಮಿ ನ್ಯೂಸ್

ಆಲಮಟ್ಟಿ: ಇಲ್ಲಿಂಯ ಜಲಾಶಯದಿಂದ ಸ್ಥಳಿಯ ರೈತರ ಜಮೀನುಗಳಿಗೆ ನೀರು ಒದಗಿಸದೆ ನಾರಾಯಣಪುರ ಜಲಾಶಯ ವ್ಯಾಪ್ತಿಯಲ್ಲಿ ತೆಲಂಗಾಣ ಮೂಲದ ಬಾಡಿಗೆ ರೈತರಿಗೆ ನೀರು ಒದಗಿಸಲು ಕಳೆದ ಕೆಲದಿನಗಳಿಂದ ಆಲಮಟ್ಟಿ ಜಲಾಯಶಯದ ವಿದ್ಯುತ್ ಉತ್ಪಾದನಾ ಘಟಕದ ಮೂಲಕ ನದಿ ಪಾತ್ರಕ್ಕೆ ನಿತ್ಯ 2500 ಕ್ಯುಸೆಕ್ ನೀರು ಹರಿಬಿಡಲಾಗುತ್ತದೆ ಎಂದು ಅಖಂಡ ಕರ್ನಾಟಕ ರೈತ ಸಂಘ ಆರೋಪಿಸಿದೆ.

ನೀರು ಬಿಡುಗಡೆ ಸ್ಥಗಿತಗೊಳಿಸುವಂತೆ ಆಗ್ರಹಿಸಿ ಶನಿವಾರ ಇಲ್ಲಿಯ ಕೆಬಿಜೆಎನ್ ಎಲ್ ಉಪ ಮುಖ್ಯ ಎಂಜಿನಿಯರ್ ಅವ–ರಿಗೆ ಮನವಿ ಸಲ್ಲಿಸಿದ ರೈತರು ನೀರು




ನಿಲ್ಲಿಸುವಂತೆ ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಮುಖಂಡರು, ಕುಡಿಯುವ ನೀರಿಗಾಗಿ ಹಾಗೂ ಜಲಚರಗಳಿಗಾಗಿ ಮೀಸಲಿಟ್ಟಿರುವ ನೀರಲ್ಲಿಯೇ ನಾರಾಯಣಪುರದ ಬಸವಸಾಗರ 4ನೇ ಪುಟಕ್ಕೆ

## ಬಸ್ ಸೇವೆಗಳ ಪುನರಾರಂಭಕ್ಕೆ ಆಗ್ರಹಿಸಿ ವಿವಿಧ ಸಂಘಟನೆಗಳ ಪ್ರತಿಭಟನೆ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಯಾವುದೇ ಸೂಕ್ತ ಕಾರಣಗಳಿಲ್ಲದೇ ಬಂದ ಮಾಡಲಾದ ಬಸ್ ಸೇವೆಗಳನ್ನು ಪುನರ್ ಆರಂಭಿಸಬೇಕು ಮತ್ತು ಅವಶ್ಯವಿರುವ ಕೆಲ ಹೊಸ ನೆಪಗಳನ್ನು ಹೇಳುವದು ಬಿಟ್ಟು ಕೂಡಲೇ ಬಂದ್ ಮಾಡಲಾದ ಬಸ್‌ಗಳನ್ನು ಪುನರ್ ಆರಂಭಿಸಬೇಕು. ಜೊತೆಗೆ ಅವಶ್ಯವಿರುವ ಮನವಿ ಪತ್ರದಲ್ಲಿ ತಿಳಿಸಿರುವ ಬಸ್ ಸೇವೆಗಳನ್ನು ಹೊಸದಾಗಿ ನೀಡಬೇಕು.




ಬಸ್ ಸೇವೆಗಳನ್ನು ನೀಡಬೇಕು ಎಂದು ಒತ್ತಾಯಿಸಿ ಪಟ್ಟಣದ ಮರ್ಚೆಂಟ್ ಅಸೋಸಿಯೇಶನ್, ನಗರಾಭಿವೃದ್ಧಿ ಹೋರಾಟ ವೇದಿಕೆ ಸೇರಿದಂತೆ ವಿವಿದ ಪ್ರಗತಿಪರ ಸಂಘಟನೆಗಳು ಪಟ್ಟಣದಲ್ಲಿ ಪ್ರತಿಭಟನೆ ನಡೆಸುವ ಮೂಲಕ ಶುಕ್ರವಾರ ಸಂಜೆ ಕೆಎಸ್‌ಆರ್‌ಟಿಸಿ ಘಟಕಾಧಿಕಾರಿಗೆ ಮನವಿ ಪತ್ರ ಸಲ್ಲಿಸಿದರು.

ಪಟ್ಟಣದ ಗ್ರಾಮದೇವತೆ ದೇವಸ್ಥಾನದಿಂದ ಶುರುವಾದ ಪ್ರತಿಭಟನೆ ಮುಖ್ಯ ಬಜಾರ, ಬಸವೇಶ್ವರ ವೃತ್ತ ಮಾರ್ಗವಾಗಿ ಬಸ್ ನಿಲ್ದಾಣದ ವರೆಗೆ ಸಾರಿಗೆ ಮಂತ್ರಿಗೆ ಧಿಕ್ಕಾರ ಹಾಕುತ್ತ ಸಾಗಿತು. ಬಳಿಕ ನಡೆದ ಬಹಿರಂಗ ಸಭೆಯಲ್ಲಿ ಹೋರಾಟಗಾರ ಬಸವರಾಜ ನಂದಿಕೇಶ್ವರಮಠ, ಬಿ.ಎಸ್.ಮೇಟಿ, ಉಮೇಶ ಜತ್ತಿ ಮತ್ತೀತರರು ಮಾತನಾಡಿ, ಬಹು ದಿನಗಳಿಂದ ಪಟ್ಟಣದಿಂದ ಆಲಮಟ್ಟಿ ರೇಲ್ವೆ ನಿಲ್ದಾಣಕ್ಕೆ ಬಸ್ ಸೌಲಭ್ಯ ಇತ್ತು. ಇದು ದೂರದ ಊರುಗಳಿಗೆ ರೈಲ್‌ಗಳ ಮೂಲಕ ಹೋಗುವ ಸಾರ್ವಜನಿಕರಿಗೆ ಸಾಕಷ್ಟು ಅನುಕೂಲವಾಗಿತ್ತು. ಅದರಂತೆ ಇನ್ನೂ ಅನೇಕ ಬಸ್‌ಗಳು ಇಲ್ಲಿಂದಲೇ ಹೊರಡುತ್ತಿದ್ದವು. ಈ ಎಲ್ಲ ಬಸ್‌ಗಳು ಬಂದ್ ಮಾಡಿದ ಕಾರಣ ಸಾರ್ವಜನಿಕ–ರಿಗೆ ಸಾಕಷ್ಟು ಅನಾನುಕೂಲವಾಗಿದೆ. ಬಸ್ ಸೇವೆ ನಿಲ್ಲಿಸಿದ್ದಕ್ಕೆ ಆದಾಯದ ನೆಪ ಹೇಳುತ್ತಿರುವ ಸಾರಿಗೆಯವರು ಬಸ್‌ಗಳಿರೊದೇ ಸಾರ್ವಜನಿಕರ ಸೇವೆಗಾಗಿ ಎಂಬ ಬಗ್ಗೆ ತಿಳಿದುಕೊಳ್ಳಬೇಕು. ಮೊದಲು ಇದ್ದ ಆದಾಯ ದಿಢೀರನೆ ಬಂದ್ ಆಗೋಕೆ ಹೇಗೆ ಸಾಧ್ಯ. ಇದೆಲ್ಲ ಇಲ್ಲವಾದಲ್ಲಿ ಇಡೀ ಪಟ್ಟಣವನ್ನು ಬಂದ್ ಮಾಡಿ ಉಗ್ರ ಹೋರಾಟ ನಡೆಸುವ ಅನಿವಾರ್ಯತೆ ಎದುರಾಗಬಹುದು ಎಂದು ಎಚ್ಚರಿಸಿದರು.

ಸಧ್ಯ ಬಂದ್ ಮಾಡಲಾದ, ಪಟ್ಟಣದಿಂದ ಹೊರಡುವ ಮುಂಬಯಿ, ಆಲಮಟ್ಟಿ ಸ್ಟೇಷನ್, ಲಿಂಗಸೂರು (ನಿರಂತರ), ವಾಸ್ಕೋ (ರಾತ್ರಿ 9), ಪುಣೆ, ರತ್ನಾಗಿರಿ, ನಾಸಿಕ, ಹಾಸನ ಈ ಊರುಗಳಿಗೆ ಪುನರ್ ಆರಂಭಿಸುವಂತೆ ಮತ್ತು ವಿಜಯಪುರ–ಮುದ್ದೇಬಿಹಾಳ–ಮೈಸೂರು, ವಿಜಯಪುರ–ಮುದ್ದೇಬಿಹಾಳ– ಶ್ರೀಶೈಲ, ಇಂಡಿ–ಮುದ್ದೇಬಿಹಾಳ–ಕಾಗಿನೆಲೆ–ರಾಣಿಬೆನ್ನೂರು, ಇಂಡಿ–ಮುದ್ದೇಬಿಹಾಳ–ಹುಬ್ಬಳ್ಳಿ ಸೇರಿದಂತೆ ಪಟ್ಟಣದಿಂದ ತಿರುಪತಿ, ಕೊಟ್ಟೂರು–ಉಜ್ಜಯಿನಿ, ಗಾಣಗಾಪುರ, ಗೋಕಾಕ–ಘಟಪ್ರಭಾ, ರಾಮದುರ್ಗ–ಸವದತ್ತಿ–ಧಾರವಾಡ, ಬೆಂಗಳೂರು ಸ್ಲೀಪರ್, ಹುಬ್ಬಳ್ಳಿ–ಮಣಿಪಾಲ, ಆನೆಗುಂದಿ, ಗುಡ್ಡಾಪುರ, ಲಿಂಗಸೂರು ಈ ಊರುಗಳಿಗೆ ಹೊಸದಾಗಿ ಬಸ್ ಸೇವೆ ಪ್ರಾರಂಭಿಸುವಂತೆ ಮನವಿ ಪತ್ರದಲ್ಲಿ ನಮೂದಿಸಲಾಗಿದೆ.

ಪ್ರತಿಭಟನೆಯಲ್ಲಿ ರಾಜಶೇಖರ ಕಲ್ಯಾಣಮಠ, ಮಹಾಂತೇಶ ವಡವಡಗಿ, ಮಹಾಂತೇಶ ಬೂದಿಹಾಳಮಠ, ಜಗದೀಶ ಲಕ್ಷೆಟ್ರ, ಹಸನ್ ಬಾಗವಾನ, ಮಲ್ಲಣ್ಣ ಹತ್ತಿ, ಸಂಜು ಬಾಗೇವಾಡಿ, ರವೀಂದ್ರ ಬಿರಾದಾರ, ಉದಯ ರಾಯಚೂರ, ಸಂತೋಷ ಬಾದರಬಂಡಿ ಸೇರಿದಂತೆ ಮತ್ತೀತರರು ಇದ್ದರು.

ಉದಯ ರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ಆಲಮಟ್ಟಿ: ದೊರೆತ 38 ಕೆಜಿ ಬೃಹತ್ ಮೀನು

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಇಲ್ಲಿಯ ಕೃಷ್ಣಾ ನದಿಯ ಹಳೆ ಚಿಮ್ಮಲಗಿ ಬಳಿಯ ಬಾವಾಸಾಬ್ ಗುಡ್ಡದ ಬಳಿ ಮೀನುಗಾರಿಕೆ ನಡೆಸುತ್ತಿದ್ದ ಮೀನುಗಾರರೊಬ್ಬರಿಗೆ 38 ಕೆಜಿ ತೂಕದ ದೊಡ್ಡ ಮೀನು ಬಲೆಗೆ ಬಿದ್ದಿದೆ.

ಚಿಮ್ಮಲಗಿ ಭಾಗ 1 ಎ ಯ ಗ್ರಾಮದ ಮೀನುಗಾರ ಭರತ ಯಮನೂರಿ ಸಾಳೆ ಅವರ ಬಲೆಗೆ ಗುರುವಾರ ಈ ಬೃಹತ್ ಗಾತ್ರದ ಮೀನು ಬಿದ್ದಿದೆ.

ಕಳೆದ ಕೆಲ ದಿನಗಳಿಂದ ದೊಡ್ಡ ಗಾತ್ರದ ಮೀನು ಬೀಳುವ 20 ಬಟ್ಟ ಅಗಲದ ಬಲೆಯನ್ನು ಹಾಕುತ್ತಿದ್ದಾರೆ. ದೊಡ್ಡ ಗಾತ್ರದ ಮೀನು ಮಾತ್ರ



ಬಲೆಗೆ ಬೀಳುತ್ತವೆ.

ಬೃಹತ್ ಗಾತ್ರದ ಮೀನು ನೋಡಲು ಜನ ತಂಡೋಪತಂಡವಾಗಿ ಆಗಮಿಸಿದರು.

ಇದು ಕಟ್ಲಾ ಜಾತಿಗೆ ಸೇರಿದ ಮೀನಾಗಿದ್ದು, 38 ಕೆಜಿ ತೂಕ ಹೊಂದಿದೆ. ಕಳೆದ ವಾರ 35 ಕೆಜಿ ಮೀನು ಇದೇ ಸ್ಥಳದಲ್ಲಿ ಬಲೆ ಹಾಕಿದ್ದ ಮತ್ತೊಬ್ಬ ಮೀನುಗಾರನಿಗೆ ಸಿಕ್ಕಿತ್ತು. ಈಗ ಮತ್ತೇ ಬೃಹತ್ ಗಾತ್ರದ ಮೀನು ಸಿಕ್ಕಿದ್ದು ಖುಷಿಯಾಗಿದೆ ಎಂದು ಮೀನುಗಾರ ಭರತ ಯಮನೂರಿ ಸಾಳೆ ಹೇಳಿದರು.

5700 ಕ್ಕೆ ಮಾರಾಟ;

ಈ ದೊಡ್ಡ ಮೀನನ್ನು ಕೂಡಾ 150 ರೂ ಗೆ ಕೆಜಿಯಂತೆ 5700 ರೂ ಗೆ ಮೀನು ವ್ಯಾಪಾರಿ ಮಹಾಂತೇಶ ಧನವೆ ಖರೀದಿಸಿದರು.

# ಶಿಷ್ಟ ಕಲಾವಿದರ ಗೌರವ ಜನಪದ ಕಲಾವಿದರಿಗಿಲ್ಲ :ಅನಸುಬಾಯಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಇಂದು ಜಾನಪದ ಕಲಾವಿದರು ಕಷ್ಟದಲ್ಲಿದ್ದಾರೆ. ಕಲೆಯ ಬೆನ್ನುಹತ್ತಿ ಬಡತನದಲ್ಲಿ ಬದುಕು ಸಾಗಿಸುತ್ತಿದ್ದಾರೆ. ಕಲೆಯ ಬಗ್ಗೆ ಅಭಿಮಾನ ಇದ್ದವರೆ ನಮಗೆ ಆಸ್ತಿ ಆಗಿದ್ದಾರೆ ಎಂದು ಕರ್ನಾಟಕ ಬಯಲಾಟ ಅಕಾಡೆಮಿ ನೂತನ ಸದಸ್ಯೆ, ಪಾರಿಜಾತ ಕಲಾವಿದೆ ಅನಸುಬಾಯಿ ವಡ್ಡರ ಹೇಳಿದರು.

ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕ ನಗರದ ಪರಿಷತ್ ಕಾರ್ಯಾಲಯದಲ್ಲಿ ಏರ್ಪಡಿಸಿದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು ಶಿಷ್ಟ ಕಲಾವಿದರ ಗೌರವ ಜನಪದ ಕಲಾವಿದರಿಗೆ ಇಲ್ಲ. ಜನಪದ ಕಲಾವಿದರನ್ನು ಅನಾದರದಿಂದ ನೋಡಲಾಗುತ್ತದೆ.





ಜನಪದ ಕಲಾವಿದರು ಮೂಲ ಕಲಾವಿದರಾಗಿದ್ದಾರೆ. ಅವರನ್ನು ಉಳಿಸಿ ಬೆಳೆಸಲು ಜಿಲ್ಲೆಯಲ್ಲಿ ಬಾಳನಗೌಡ ಪಾಟೀಲರ ನೇತೃತ್ವದ ಕನ್ನಡ ಜಾನಪದ ಪರಿಷತ್ ಶ್ರಮಿಸುತ್ತಿರುವುದು ಸಂತೋಷ ತಂದಿದೆ ಎಂದರು.

ಸನ್ಮಾನ ನೆರವೇರಿಸಿ ಮಾತನಾಡಿದ ಪ್ರವಚನಕಾರ ಬಾಬುರಾವ್ ಮಹಾರಾಜರು ಜಾನಪದ ಕಲೆ ಮತ್ತು ಕಲಾವಿದರು ನಮ್ಮ ದೇಶದ ಸನಾತನ ಸಂಸ್ಕೃತಿಯ ಕುರುಹು. ಕಲಾವಿದರು ಕಷ್ಟದಲ್ಲಿರಬಾರದು. ಕಲಾವಿದರನ್ನು ಗೌರವದಿಂದ ಕಾಣಬೇಕು ಅಂದಾಗ ಸಂಸ್ಕೃತಿ ಉಳಿಯುತ್ತದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ, ಕನ್ನಡ ಜಾನಪದ ಪರಿಷತ್ತು ಕಲಾವಿದ–ರಿಗಾಗಿ ಮತ್ತು ಜನಪದ ಕಲೆ ಉಳಿಸುವುದಕ್ಕಾಗಿ ಹುಟ್ಟಿದ ಸಂಘಟನೆಯಾಗಿದೆ. ಜಿಲ್ಲೆಯಲ್ಲಿ ಮುನ್ನೂರಕ್ಕೂ ಹೆಚ್ಚು ಕಾರ್ಯಕ್ರಮ ಸಂಘಟಿಸಿ ಕಲಾವಿದರಿಗೆ ವೇದಿಕೆ, ಸನ್ಮಾನ, ಪ್ರಶಸ್ತಿ ಒದಗಿಸಿ ಮಾಶಾಸನಕ್ಕೂ ಅನುಕೂಲ ಕಲ್ಪಿಸಿದೆ ಎಂದರು.

ಕಾರ್ಯಕ್ರಮದಲ್ಲಿ ಸಾಹಿತಿ ಶಂಕರ ಬೈಚಬಾಳ, ಸಾಂಸ್ಕೃಣಟಿ–ಜಜಜಿುಟಜಜತಿಕ ಚಿಂತಕ ಮೋಹನ ಕಟ್ಟಿಮನಿ, ಕ ಜಾ ಪ ಜಿಲ್ಲಾ ಖಜಾಂಚಿ ಪ್ರೊ ಎಸ್ ಎಲ್ ಮೇತ್ರಿ, ಕಾರ್ಯದರ್ಶಿ ಡಾ ರಮೇಶ ತೇಲಿ, ಸಂಚಾಲಕ ಪ್ರೊ ಗುರುರಾಜ ಹಳ್ಳೂರ, ಇಂಡಿ ತಾಲೂಕಾಧ್ಯಕ್ಷ ಆರ್ ವಿ ಪಾಟೀಲ, ಮುದ್ದೇಬಿಹಾಳ ತಾಲೂಕಾಧ್ಯಕ್ಷ ಎ ಆರ್ ಮುಲ್ಲಾ ಉಪಸ್ಥಿತರಿದ್ದರು.

ಜಿಲ್ಲಾ ಘಟಕದ ಸದಸ್ಯ ಎಸ್ ಅಂಆ್ ಬಿರಾದಾರ ಸ್ವಾಗತಿಸಿ ನಿರೂಪಿಸಿದರು. ಸದಸ್ಯ ಮೌಲಾಸಾಹೇಬ ಜಹಾಗೀರದಾರ ವಂದಿಸಿದರು.

# ತಿಳಗೂಳ ಪ್ರೌಢಶಾಲೆಗೆ ಶೇ.100 ರಷ್ಟು ಫಲಿತಾಂಶ

**ಉದಯರಶ್ಮಿ ನ್ಯೂಸ್**

ಕಲಕೇರಿ: ಸಮಿಪದ ತಿಳಗೂಳ ಗ್ರಾಮದ ಶ್ರೀ ಸದ್ಗುರು ಖಾದಿ ಮತ್ತು ಗ್ರಾಮೀಣ ಔಧ್ಯೋಗಿಕ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಅನುಧಾನಿತ ತಿಳಗೂಳ ಪೌಡಶಾಲೆಯ ವಿದ್ಯಾರ್ಥಿಗಳು 2023–24 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದು ಶಾಲೆಯ ಒಟ್ಟು ಪಲಿತಾಂಶ ಶೇ.100 ರಷ್ಟಾಗಿದೆ.

ವರ್ಷಾ ಯಡ್ರಾಮಿ 571 ಅಂಕ (91.36%) ಪಡೆದು ಪ್ರಥ–'ಮ ಸ್ಥಾನ, ಸುಮಿತ್ರಾ ಹಿರೇಮಠ 555 ಅಂಕ (88.80%) ಪಡೆದು ದ್ವಿತೀಯ ಸ್ಥಾನ, ಚೈತ್ರಾ ಬೀರಗೊಂಡ 541 ಅಂಕ (86.56%) ಪಡೆದು ತೃತೀಯ ಸ್ಥಾನ, ಹಾಗೂ ಅಕ್ಷತಾ ಚವ್ಹಾಣ 528 ಅಂಕ (84.48%) ಪಡೆದು ನಾಲ್ಕನೇಯ ಸ್ಥಾನ, ರಕ್ಷೀತಾ ಸಾತಿಹಾಳ 523 ಅಂಕ (83.68%) ಐದನೇಯ ಸ್ಥಾನ, ಆದಿತ್ಯಾ ನಾಯ್ಕೋಡಿ 521 ಅಂಕ



(83.36%) ಪಡೆದು ಆರನೇಯ ಸ್ಥಾನ ಪಡೆದುಕೊಂಡಿದ್ದಾರೆ, ಪರೀಕ್ಷೆಗೆ 83 ವಿದ್ಯಾರ್ಥಿಗಳು ಹಾಜರಾಗಿದ್ದು 3 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ 44 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ 24 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ,12 ವಿದ್ಯಾರ್ಥಿಗಳು ತೃತೀಯ ಶ್ರೇಣಿಯಲ್ಲಿ ಪಾಸಾಗಿದ್ದು ಶಾಲೆಯ ಓಟ್ಟು ಫಲಿತಾಂಶ ಶೇ 100 ರಷ್ಟಾಗಿದ್ದು, ವಿದ್ಯಾರ್ಥಿಗಳ ಸಾಧನೆಗೆ ಮುಖ್ಯಗುರುಗಳು ಹಾಗೂ ಶಿಕ್ಷಕ ಸಿಬ್ಬಂದ್ದಿ ಅಭಿನಂದನೆ ಸಲ್ಲಿಸಿದ್ದಾರೆ.

# ಚಿಮ್ಮಡ: ಸಂಭ್ರಮದ ಮೂರು ಮೂಖದವ್ವದೇವಿ ಜಾತ್ರೆ

**ಉದಯರಶ್ಮಿ ನ್ಯೂಸ್**

ಚಿಮ್ಮಡ: ಮೂರು ವರುಷಗಳಿಗೊಮ್ಮೆ ನಡೆಯುವ ಗ್ರಾಮದ ಆರಾಧ್ಯ ದೇವತೆ ಶ್ರೀ ಮೂರು ಮೂಖದವ್ವದೇವಿ (ಲಕ್ಮಿದೇವಿ) ಜಾತ್ರಾ ಮಹೋತ್ಸವ ಸಂಭ್ರಮ ಸಡಗರದೊಂದಿಗೆ ವಿಜ್ರಂಬಣೆಯಿಂದ ಜರುಗಿತು.

ಅಲಂಕ್ರತ ದೊಡ್ಡ ಪಾದ ಪದಕಗಳನ್ನು ಶ್ರೀ ಹನುಮಾನ ದೇವರಿಗೆ ಅರ್ಪಿಸುವ ಮೂಲಕ ಪ್ರಾರಂಭಗೊಂಡ ಈ ಜಾತ್ರಾ ಮಹೋತ್ಸವದಲ್ಲಿ ರಾತ್ರಿ ಡೊಳ್ಳು ಕುಣಿತ, ಬ್ಯಾಂಡಬಾಜಾ, ಹಲಿಗೇ ಮೇಳ ಹಾಗೂ ಬ್ಯಾಂಜೋ ತಂಡದೊಂದಿಗೆ ಕುದುರೆ ಸೋಗು, ಯಕ್ಷಗಾನ ಮಾದರಿ ಹಾಗೂ ವಿವಿಧ ವೇಷಧಾರಿಗಳಿಂದ ನೃತ್ಯ ಪ್ರದರ್ಶನ ವಿಶೇಷವಾಗಿತ್ತು.

ರಾತ್ರಿ ಈ ಜಾತ್ರೆಯ ನಿಮಿತ್ಯ ಶ್ರೀನಿಧಿ ಸ್ಪೋರ್ಟ್ಸ್ ಕ್ಲಬ್‌ನಿಂದ ಹಮ್ಮಿಕೊಳ್ಳಲಾಗಿದ್ದ 55 ಕೆ.ಜಿ. ಕಬ್ಬಡ್ಡಿ ಪಂದ್ಯಾವಳಿಗಳು ಎರಡು



ದಿನಗಳ ಕಾಲ ನಡೆದವು.

ಶ್ರೀ ದೇವಿಯ ಉಡಿ ತುಂಬುವ ಕಾರ್ಯಕ್ರಮ, ಮಹಾಪ್ರಸಾದ ವಿತರಣೆ, ನಾಟಕ ಪ್ರದರ್ಶನ ಸೇರಿದಂತೆ ವಿವಿಧ ಸಾಂಸಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾತ್ತು ಅಲ್ಲದೇ ಮಹಾರಾಷ್ಟದ ಕೋಲ್ಹಾಪೂರ್‌ನ ಪ್ರಸಿದ್ದ ಸೂರಜಕುಮಾರ್ ಪ್ರೊಡಕ್ಷನ್‌ರವರ 'ಸೈರಾಟ್ ರಸಮಂಜರಿ ಕಾರ್ಯಕ್ರಮ ನೆರೆದ ಸಾರ್ವಜನಿಕರನ್ನು ಮಂತ್ರಮುಗ್ದಗೊಳಿಸಿತು.

ಅಕಾಲಿಕ ಮಳೆಯಿಂದ ಸ್ವಲ್ಪಮಟ್ಟಿಗೆ ತೊಂದರೆಯಾದರೂ ಜಾತ್ರೆಯ ಸಂಭ್ರಮಕ್ಕೆನು ಕೊರತೆಯಾಗಲಿಲ್ಲ. ಬನಹಟ್ಟಿ ಸಿಪಿಐ ಸಂಜೀವಕುಮಾರ ಬಳೆಗಾರ, ಪಿಎಸೈ ಶಾಂತಾ ಹಳ್ಳಿ ತಮ್ಮ ಸಿಬ್ಬಂದಿಗಳೊಂದಿಗೆ ಸೂಕ್ತ ಬಂದೋಬಸ್ತ ಕಲ್ಪಿಸಿದ್ದರು.

# ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕರ ಪಾತ್ರ ಮಹತ್ತರ :ನ್ಯಾ.ಕುಂದರ್

ವಿಜಯಪುರ: ಒಂದು ದೇಶದ ಅಭಿವೃದ್ಧಿ ಅಲ್ಲಿನ ಕಾರ್ಮಿಕರ ಮೇಲೆ ಅವಲಂಬಿತವಾಗಿರುತ್ತದೆ. ಸದೃಡ ದೇಶ ಕಟ್ಟುವಲ್ಲಿ ಕಾರ್ಮಿಕರು ಶ್ರಮ ಅಪಾರವಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದಶಿಗಳಾದ ಸಂತೋಷ ಎಸ್. ಕುಂದರು ಹೇಳಿದರು.

ಅವರು ಬುಧವಾರ ನಗರದ ಶಿವಗಿರಿ ರಸ್ತೆಗೆ ಇರುವ ಲೊಯೋಲ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಅನೌಪಚಾರಿಕ ಶಿಕ್ಷಣ ಸಂಸ್ಥೆ, ಲೊಯೋಲ ಕೈಗಾ–ರಿಕಾ ತರಭೇತಿ ಸಂಸ್ಥೆ ಹಾಗೂ ಬಿಜಾಪುರ ನಗರ ಕಟ್ಟಡ ಮತ್ತು



ಅಸಂಘಟಿತ ಕಾರ್ಮಿಕರ ಯೂನಿಯನ್(ರಿ), ವಿಜಯಪುರ ಇವರ ಆಶ್ರಯದಲ್ಲಿ ನಡೆದ ವಿಶ್ವ ಕಾರ್ಮಿಕರ ದಿನಾಚರಣೆ–2024 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ದೇಶದ ಬೆಳವಣಿಗೆಗೆ ಕಾರ್ಮಿಕರ ಕೊಡುಗೆ ಅನನ್ಯವಾಗಿದೆ. ಕಾರ್ಮಿಕರಿಗೆ ಏನಾದರೂ ತೊಂದರೆ ಊಂಟಾದರೆ ಉಚಿತ ಕಾನೂನು ಸೇವಾ ಪ್ರಾಧಿಕಾರಕ್ಕೆ ಭೇಟಿ ನೀಡಿ ಸಮಸ್ಯೆಯನ್ನು ಬಗೆಹ–ರಿಸಿಕೊಳ್ಳಬಹುದು ಎಂದು ಮಾಹಿತಿ ನೀಡಿದರು.

ಅನೌಪಚಾರಿಕ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಫಾದರ್ ಟಿಂಸೋಲ್ ಮಚಾದೋ ಪ್ರಾಸ್ತಾವಿಕವಾಗಿ ಮಾತನಾಡಿ, ಹಲವಾರು ಯೋಜನೆಗಳು ಕಾರ್ಮಿಕರಿಗಿದ್ದು, ಅವುಗಳನ್ನು ಪಡೆದುಕೊಳ್ಳಲು ಮುಂದಾಗಬೇಕೆಂದು ತಿಳಿಸಿದಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಎಸ್ ಜಿ ಖೈನೂರ, ಶ್ರೀಮತಿ ಜಗದೇವಿ ಸಜ್ಜನ, ಕಾರ್ಮಿಕ ನೀರಿಕ್ಷರು, 2ನೇ ವೃತ್ತ, ವಿಜಯಪುರ ಐ.ಟಿ.ಐ. ಕಾಲೇಜನ ಪ್ರಾಂಶುಪಾಲರಾದ ಫಾದರ್ [illegible]ಂಟನಿ ಲಾರೆನ್ಸ್ ವೇಧಿಕೆಯ ಮೇಲೆ ಅಸಿನರಾದ್ದರು.

ಕಾರ್ಯಕ್ರಮದಲ್ಲಿ ವಿಜಾಪುರ ನಗರ ಕಟ್ಟಡ ಮತ್ತು ಅಸಂಘಟಿತ ಕಾರ್ಮಿಕರ ಯೂನಿಯನ್‌ನ ಪದಾಧಿಕಾ–ರಿಗಳು ಮತ್ತು ವಿವಿಧ ಸ್ಥಳೀಯ ಕಾರ್ಮಿಕ ಸಂಘಗಳಿಂದ ಪುರುಷ ಮತ್ತು ಮಹಿಳಾ ಕಾರ್ಮಿಕರು ಮತ್ತು ಲೊಯೋಲ ತಾಂತ್ರಿಕ ತರಬೇತಿ ಶಾಲೆಯ ಮಕ್ಕಳು, , ಶಿಕ್ಷಕರು, ಒಟ್ಟು 120 ಕಾರ್ಮಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಮೇ.18ರಂದು ಗ್ರಾಹಕರ ಸಂವಾದ ಸಭೆ

ವಿಜಯಪುರ: ವಿಜಯಪುರ ಹೆಸ್ಕಾಂನ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪಕೇಂದ್ರಕ್ಕೆ ಸಂಬಂಧಿಸಿದಂತೆ ಮೇ.18ರಂದು ಮಧ್ಯಾಹ್ನ 3 ಗಂಟೆಗೆ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪವಿಭಾಗದ ಕಚೇರಿಯಲ್ಲಿ ರೈತರು ಹಾಗೂ ಸಾರ್ವಜನಿಕರು ಸಮಸ್ಯಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಆದ ಕಾರಣ ವಿಜಯಪುರ ಹೆಸ್ಕಾಂ ಗ್ರಾಮೀಣ ಉಪವೀಭಾಗದ ಕಚೇರಿಗೆ ಒಳಪಡುವ ಗ್ರಾಮಗಳ ಗ್ರಾಹಕರು ಹಾಗೂ ಸಾರ್ವಜನಿಕರು ಈ ಸಭೆಯಲ್ಲಿ ಪಾಲ್ಗೊಂಡು ಸದುಪಯೋಗಪಡಿಸಿಕೊಳ್ಳಬೇಕು ಎಂದು ವಿಜಯಪುರ ಹೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಥಮ ಪಿಯುಸಿ: ಉಚಿತ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಅಲ್ಪ ಸಂಖ್ಯಾತರ ಸಮುದಾಯಕ್ಕೆ ಸೇರಿದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಪಾರ್ಸಿ ಮತ್ತು ಸಿಖ್) ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ/ಕಾಲೇಜು, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಕಾಲೇಜು, ಸರ್ಕಾರಿ ಮುಸ್ಲಿಂ ವಸತಿ ಶಾಲೆ/ಕಾಲೇಜು, ಮತ್ತು ಇಂಟಿಗ್ರೇಟೆಡ್ ಶಾಲೆಗಳಲ್ಲಿ 2024–25ನೇ ಶೈಕ್ಷಣಿಕ ಸಾಲಿನಪ್ರಥಮ ಪಿಯುಸಿ (ವಿಜ್ಞಾನ ಹಾಗೂ ವಾಣಿಜ್ಯ) ತರಗತಿ ಪ್ರವೇಶಕ್ಕೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಕೆಗೆ ಮೇ.27 ಕೊನೆಯ ದಿನವಾಗಿದ್ದು, ಅಲ್ಪಸಂಖ್ಯಾತ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75ರಷ್ಟು ಪ್ರವೇಶ ಮೀಸಲಿರಿಸಿದೆ. ವೀಕಲಚೇತನರಿಗೆ ಶೇ.3ರಷ್ಟು, ಪ.ಜಾತಿ, ಪ.ಪಂಗಡ ಹಾಗೂ ಹಿಂದೂಳಿದ ವರ್ಗದ ವಿದ್ಯಾರ್ಥಿಗಳಿಗೆ ಶೇ.25ರಸ್ಟು ಪ್ರವೇಶಾತಿ ಮೀಸಲಿರಿಸಿದೆ. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ, ಉಚಿತ ಸಮವಸ್ತ್ರ, ಪಠ್ಯಪುಸ್ತಕ, ನೋಟ್‌ಬುಕ್, ಲೇಖನಿ ಸಾಮಗ್ರಿಗಳು, ಸ್ಕೂಲ್ ಬ್ಯಾಗ್ ಹಾಗೂ ಊಟ ವಸತಿ ಸೌಲಭ್ಯ ಕಲ್ಪಿಸಲಾಗುತ್ತದೆ.

ಅರ್ಜಿಗಳಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾ–ರಿಗಳ ಕಚೇರಿ, ಮೌಲಾನಾ ಆಝಾದ ಭವನ, ಜಿಲ್ಲಾ ಪಂಚಾಯತ್, ರಸ್ತೆ, ಕನಕದಾಸ ಬಡಾವಣೆ, ವಿಜಯಪುರ ದೂ: 08352–295523, ಪ್ರಾಂಶುಪಾಲರು, ಡಾ.ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆ ಅರಕೇರಿ ಮೊ: 9591612073, ಸಿಂದಗಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮೊ: 9980952960 ಹಾಗೂ ಚಡಚಣ ಮೊರಾರ್ಜಿ ಶಾಲೆಯ ಪ್ರಾಂಶುಪಾಲ ಮೊ: 9620828185, ಇಂಡಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲ ಮೊ: 7892371709, ಮುದ್ದೇಬಿಹಾಳ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲ ಮೊ: 9844493306, ಮುದ್ದೇಬಿಹಾಳ ನಂ2ರ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲ ಮೊ: 7259179398, ಮತ್ತು ಸರ್ಕಾರಿ ಮುಸ್ಲಿಂ ವಸತಿ ಶಾಲೆ ಮೊ:8310830407 ಸಂಖ್ಯೆಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ 8277799990ಗೆ ಕರೆ ಮಾಡಬಹುದು ಎಂದು ವಿಜಯಪುರ ಅಲ್ಪಸಂಖ್ಯಾತರ ಕಲ್ಯಾಣ ಇಲಾಕೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ.18ರಂದು ವಿಶ್ವ ವಸ್ತುಸಂಗ್ರಹಾಲಯ ದಿನಾಚರಣೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಗೋಲಗುಂಬಜ್ ಆವರಣದಲ್ಲಿರುವ ಪ್ರಾಚ್ಯವಸ್ತು ಸಂಗ್ರಹಾಲಯದಲ್ಲಿ ಮೇ.18ರಂದು ಬೆಳಗ್ಗೆ 10 ಗಂಟೆಗೆ ಅಂತರಾಷ್ಟ್ರೀಯ ವಸ್ತು ಸಂಗ್ರಹಾಲಯದ ದಿನಾಚರಣೆ ನಡೆಯಲಿದೆ. ವಿಜಯಪುರದ ಸಿಕಾಬ್ ಎಆರ್‌ಎಸ್‌ಐ, ಇನಾಮ್ದಾರ್ ಮಹಿಳಾ ಕಾಲೇಜು ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ಮಲ್ಲಿಕಾರ್ಜುನ ಎಸ್. ಮೇತ್ರಿ ಕಾರ್ಯಕ್ರಮವನ್ನು ಉದ್ಘಾಟಿಸುವರು. ವಿ.ಬಿ. ದರ್‌ಬಾರ್ ಪಿ.ಯು. ಕಾಲೇಜಿನ ಇತಿಹಾಸ ವಿಭಾಗದ ಅನಿಲ್‌ಕುಮಾರ್ ಜಿ. ತೊಬ್ಬಿ, ವಿಶೇಷ ಉಪನ್ಯಾಸ ನೀಡಲಿದ್ದಾರೆ. ಧಾರವಾಢ ವಲಯದ ಅಧೀಕ್ಷಕ ಪುರಾತತ್ವವಿದರಾದ ಡಾ. ರೇಷ್ಮ. ಅರ್. ಸಾವಂತ್ ಕಾರ್ಯಕ್ರಮದಲ್ಲಿ ಉಪಸ್ಥಿತ–ರಿರಲಿದ್ದಾರೆ.

ಜನಸಾಮಾನ್ಯರಲ್ಲಿ ವಿಶೇಷವಾಗಿ ಮಕ್ಕಳಲ್ಲಿ ನಮ್ಮ ದೇಶದ ಚರಸಾಂಸ್ಕೃತಿಕ ಸಂಪತ್ತಿನ ಬಗೆಗೆ ತಿಳಿವಳಿಕೆ ನೀಡಿ ಅಂತಹ ಸಂಪತ್ತನ್ನು ಸಂರಕ್ಷಿಸಲು ಪ್ರೇರೇಪಿಸುವುದು ಹಾಗೂ ಸಂಶೋಧನೆಯಲ್ಲಿ ಪ್ರಾಚ್ಯವಸ್ತುಗಳನ್ನು ಕುರಿತು ಮಾಹಿತಿಯನ್ನು ಬಳಸಿಕೂಳ್ಳುವಂತೆ ಪ್ರೋತ್ಸಾಹಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶ. ಈ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿಗಳಿಗಾಗಿ ಪ್ರಬಂಧ ಲೇಖನ, ಚಿತ್ರಕಲೆ (ಡ್ರಾಯಿಂಗ್) ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಹಾಗೂ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತ–ರಿಸಲಾಗುವುದು.


ಸಾರ್ವಜನಿಕರು ಹಾಗೂ ವಿದ್ಯಾರ್ಥಿ ಸಮುದಾಯ ಹೆಚ್ಚಿನ ಸಂಖ್ಯೆಯಲ್ಲಿ ಸಕ್ರಿಯವಾಗಿ ಭಾಗವಹಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ವಿಜಯಪುರ ಭಾರತೀಯ ಪುರಾತತ್ವ ಸರ್ವೇಕ್ಷಣ, ಪುರಾತತ್ವ ಸಂಗ್ರಹಾಲಯದ ಸಹಾಯಕ ಪುರಾತತ್ವವಿದರಾದ ಎನ್. ಪ್ರಸನ್ನಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಂಡ ಹೆಂಡಿರ ಜಗಳ... ಗಂಧ ತೀಡಿದಂಗ

**ಉದಯರಶ್ಮಿ ದಿನಪತ್ರಿಕೆ**

ಪ್ರವೀಣ್ ಮತ್ತು ಪ್ರಿಯಾ ಒಂದೇ ಆಫೀಸಿನಲ್ಲಿ ಕೆಲಸ ಮಾಡುತ್ತಿದ್ದ ಸಹೋದ್ಯೋಗಿಗಳು.

**ವೀಣಾಂತರಂಗ**



**–ವೀಣಾ ಎಚ್. ಪಾಟೀಲ್, ಮುಂಡರಗಿ**

ಪರಸ್ಪರ ಸ್ನೇಹ ಪ್ರೇಮವಾಗಿ, ಪ್ರೇಮಕ್ಕೆ ಹಿರಿಯರ ಒಪ್ಪಿಗೆ ದೊರೆತು ಮದುವೆ ಎಂಬ ಮುದ್ರೆ ಬಿದ್ದು ಈಗಾಗಲೇ ಆರು ತಿಂಗಳಾಗಿತ್ತು. ಇಬ್ಬರೂ ಸಿಟಿ ಬಸ್ಸಿನಲ್ಲಿ ಒಟ್ಟಿಗೆ ಆಫೀಸಿಗೆ ಹೋಗಿ ಬರುತ್ತಿದ್ದರು.

ಅದೊಂದು ದಿನ ದಂಪತಿಗಳಿಬ್ಬರೂ ಯಾವುದೋ ಕಾರಣ–ಕ್ಕೆ ಜಗಳವಾಡಿ ಮುನಿಸಿಕೊಂಡಿದ್ದರು. ಇಬ್ಬರಲ್ಲಿ ಯಾರೊಬ್ಬರೂ ಸೋತು ಮಾತನಾಡಲಿಲ್ಲ. ಪ್ರಿಯಾ ತನ್ನ ಪಾಡಿಗೆ ತಾನು ಎದ್ದು ಮನೆ ಕೆಲಸ ಪೂರೈಸಿ ತಿಂಡಿ ಮಾಡಿದರೆ, ಪ್ರವೀಣ್ ನಿತ್ಯ ವಿಧಿಗಳನ್ನು ಪೂರೈಸಿ ತಿಂಡಿ ತಿಂದು ಮನೆಯ ಹೊರಗೆ ನಿಂತನು. ಈಗಾಗಲೇ ತಿಂಡಿ ತಿಂದು ರೆಡಿಯಾಗುತ್ತಿದ್ದ ಆಕೆ ಕೂಡ ತನ್ನ ಅಲಂಕಾರವನ್ನು ಪೂರೈಸಿ ಇಬ್ಬರಿಗೂ ಊಟದ ಡಬ್ಬಿ ಮತ್ತು ನೀರನ್ನು ತೆಗೆದುಕೊಂಡು ಮನೆಯ ಹೊರಬಂದು ನಿಲ್ಲಲು, ಆತ ಮನೆಯ ಬಾಗಿಲನ್ನು ಚಿಲಕ ಹಾಕಿ ಕೀಲಿ ಜಡಿದನು. ಪರಸ್ಪರ ಮಾತನಾಡದೆ ಇದ್ದರೂ



ಜೊತೆಯಾಗಿಯೇ ಬಸ್ ಸ್ಟಾಪ್ ಗೆ ಬಂದು ನಿಂತ ಆ ದಂಪತಿಗಳಲ್ಲಿ ಪತ್ನಿ ಯಾವಾಗಲೂ ಕೂಡುತ್ತಿದ್ದ ಹಾಗೆ ಪತಿಯ ಪಕ್ಕ ಕುಳಿತುಕೊಳ್ಳದೆ ಮುಂದಿನ ಸೀಟಿಗೆ ಹೋಗಿ ಕುಳಿತಳು. ಇದನ್ನು ನೋಡಿ ತುಸು ಅಸಮಾಧಾನಗೊಂಡರೂ ಏನೂ ಮಾಡಲಾಗದೆ ಕೈ ಕೈ ಹಿಸುಕಿಕೊಂಡು ಸುಮ್ಮನೆ ಕುಳಿತ ಪತಿ–ರಾಯ.

ಪಕ್ಕಕ್ಕೆ ತಿರುಗಿ ನೋಡಿದ ಪ್ರಿಯಾಗೆ ಕಂಡದ್ದು ಒಬ್ಬ ಆಕರ್ಷಕ ವ್ಯಕ್ತಿತ್ವದ 30ರ ಹರೆಯದ ಸುಂದರ ತರುಣ. ಅದೇ ಸಮಯಕ್ಕೆ ಆತನು ಕೂಡ ಈಕೆಯತ್ತ ತಿರುಗಿ ನೋಡಿದಾಗ ಪರಸ್ಪರ ಮುಗುಳ್ನಗೆ ವಿನಿಮಯವಾಯಿತು. ಕೆಲ ಕ್ಷಣಗಳ ನಂತರ ಆಕೆಯೊಂದಿಗೆ ಕುಶಲೋಪ–ರಿಯನ್ನು ಆರಂಭಿಸಿದ ಆ ವ್ಯಕ್ತಿ. ಆಕೆಯೂ ಕೂಡ ಆತನ ಮಾತಿಗೆ ಸ್ಪಂದಿಸಿದಳು. ಕೆಲವು ನಿಮಿಷಗಳ ಮಾತುಕತೆಯ ನಂತರ ಆತ ತಾನು ಕಾರನ್ನು ಸರ್ವಿಸಿಗೆ ಬಿಟ್ಟಿರುವುದರಿಂದ ಇಂದು ಬಸ್ಸಿನಲ್ಲಿ ಬಂದಿರುವುದಾಗಿ ಹೇಳಿದನು... ಜೊತೆಗೆ ತನ್ನ ಮನೆಯಲ್ಲಿ ಮದುವೆಗೆ ಒತ್ತಾಯ ಮಾಡುತ್ತಿರುವುದರಿಂದ ಸೂಕ್ತವಾದ ಕನ್ಯೆಯ ಹುಡುಕಾಟದಲ್ಲಿರುವೆ ಎಂದು ಆಕೆಯನ್ನು ಆಪಾದಮಸ್ತಕ ನೋಡುತ್ತಾ ಹೇಳಿದನು.



ಈಗಾಗಲೇ ಹಿಂದೆ ಕುಳಿತು ಇವರ ಮಾತುಗಳನ್ನು ಕೇಳುತ್ತಾ ಚಡಪಡಿಸುತ್ತಿದ್ದ ಪತಿರಾಯನಿಗೆ ಇನ್ನು ಸುಮ್ಮನೆ ಕೂರಲಾಗಲಿಲ್ಲ. ಕೂಡಲೇ ಪತ್ನಿಯನ್ನು ಉದ್ದೇಶಿಸಿ ಪ್ರಿಯಾ, ಸಾನ್ವಿ ಪುಟ್ಟಿಯ ಬರ್ತಡೇ ಬಟ್ಟೆ ಖರೀದಿಸಲು ಹೋಗಬೇಕು ಎಂಬುದು ನೆನಪಿದೆಯಲ್ಲವೇ? ಎಂದು ಜೋರಾಗಿ ಆಕೆಯ ಭುಜವನ್ನು ತಟ್ಟಿ ಕೇಳಿದನು. ಗಂಡನ ಮಾತಿಗೆ ಸ್ವಲ್ಪ ಗಲಿಬಿಲಿಗೊಂಡರೂ ಪ್ರಿಯಾ ಸಂಭಾಳಿಸಿಕೊಂಡು ಇಂದು ಸಂಜೆಯೇ ತಂದು ಬಿಡೋಣ ಎಂದು ಉತ್ತರಿಸಿದಳು ಕೂಡಲೇ ಪ್ರಿಯಾಳ ಪಕ್ಕ ಕುಳಿತಿ–ದ್ದ ವ್ಯಕ್ತಿ ಹಿಂತಿರುಗಿ ಪ್ರವೀಣನನ್ನು ನೋಡಿ ಯಾರಿವರು? ಎಂಬಂತೆ



ಪ್ರಿಯಾಳಿಗೆ ಸನ್ನೆ ಮಾಡಿ ಕೇಳಿದನು. ಕೂಡಲೇ ಪ್ರಿಯ ಆತ ತನ್ನ ಪತಿ ಎಂದು ಪರಿಚಯಿಸಿದಳು. ಕೊಂಚ ಸಲುಗೆಯಿಂದಲೇ ಪ್ರಿಯಾಳೊಂದಿಗೆ ವ್ಯವಹರಿಸುತ್ತಿದ್ದ ಆಕೆಯ ಪಕ್ಕ ಕುಳಿತ ವ್ಯಕ್ತಿ ಇದರಿಂದ ತುಸು ಕಕ್ಕಾವಿಕ್ಕಿಯಾದನು. ಮುಂದೆ ಕೆಲವೇ ನಿಮಿಷಗಳಲ್ಲಿ ಬಸ್ಸು ಸ್ಟಾಪಿಗೆ ಬಂದು ನಿಲ್ಲುತ್ತಲೇ ಎದ್ದು ನಿಂತ ಪ್ರವೀಣ್ ಪ್ರಿಯಾಳ ಕೈ ಹಿಡಿದು ಬಸ್ಸಿನಿಂದ ಕೆಳಗಿಳಿಯುತ್ತಲೇ ಆ ಪಕ್ಕದ ವ್ಯಕ್ತಿಗೆ ಬಾಯ್ ಹೇಳಿದನು.

ಬಸ್ಸು ಮುಂದೆ ಹೋದ ಕೂಡಲೇ ಬಸ್ ಸ್ಟಾಪಿನ ಒಂದು ಮೂಲೆಯಲ್ಲಿ ನಿಂತು ಒಂದೇ ಸಮನೆ ಜೋರಾಗಿ ನಕ್ಕಳು ಪ್ರಿಯಾ. ಆಕೆಯ ನಗುವಿನಲ್ಲಿ ಕಳೆದುಹೋದ ಪ್ರವೀಣ. ನಕ್ಕು ಸಾಕಾದ ಮೇಲೆ "ಪ್ರವೀಣ್, ಈ ಸಾನ್ವಿ ಯಾರು? ಎಂದು ಕೇಳಿದಳು ಪ್ರಿಯಾ!. ಕೂಡಲೇ ನಸುನಗುತ್ತಾ ಪ್ರವೀಣ ನಮಗೆ ಮುಂದೆ ಹುಟ್ಟುವ ಮಗುವಿನ ಹೆಸರು ಸಾನ್ವಿ ಎಂದು ಹೇಳಿದನು. ಮತ್ತೊಮ್ಮೆ ಜೋರಾಗಿ ಇಬ್ಬರು ನಕ್ಕು ಕೈ ಕೈ ಹಿಡಿದುಕೊಂಡು ಬೇರೊಂದು ಬಸ್ಸನ್ನು ಹತ್ತಿ ತಮ್ಮ ಗಮ್ಯದತ್ತ ತೆರಳಿದರು.

# ಉರ್ದು ಪಪೂ ಕಾಲೇಜ್ ಆರಂಭಿಸಲು ಹುಣಶ್ಯಾಳ ಗ್ರಾಮಸ್ಥರ ಮನವಿ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಹುಣಶ್ಯಾಳ ಗ್ರಾಮಕ್ಕೆ ಉರ್ದು ಪದವಿ ಪೂರ್ವ ಕಾಲೇಜು ಮಂಜೂರ ಮಾಡುವ ಮೂಲಕ ಹೆಣ್ಣುಮಕ್ಕಳ ಉನ್ನತ ವ್ಯಾಸಂಗಕ್ಕೆ ಅನುಕೂಲ ಕಲ್ಪಿಸಬೇಕು ಎಂದು ಗ್ರಾಮಸ್ಥರು ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಲ್ಲಿ ಮನವಿ ಮಾಡಿದ್ದಾರೆ.

ತಾಲ್ಲೂಕಿನ ಹುಣಶ್ಯಾಳ ಗ್ರಾಮದಲ್ಲಿ ಸರಕಾರಿ ಉರ್ದು ಪದವಿ ಪೂರ್ವ ಕಾಲೇಜು ಬಹುದಿನಗಳ ಬೇಡಿಕೆಯಾದ್ದು, ಈಗಾಗಲೇ ಗ್ರಾಮದಲ್ಲಿ ಸರಕಾರಿ ಉರ್ದು ಪ್ರೌಢಶಾಲೆಯಿದೆ. ಪ್ರೌಢಶಾಲೆಯ ವ್ಯಾಸಂಗದ ನಂತರ ಕಾಲೇಜು ಅಧ್ಯಯನ ಅಗತ್ಯವಾಗಿದೆ. ಹುಣಶ್ಯಾಳ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಗ್ರಾಮುಗಳಲ್ಲಿ ಬಹಳಷ್ಟು ಅಲ್ಪಸಂಖ್ಯಾತ ಸಮುದಾಯದ ಮಕ್ಕಳಿಗಾಗಿ ಪದವಿಪೂರ್ವ ಕಾಲೇಜು ಅಗತ್ಯವಾಗಿದೆ.

ಗ್ರಾಮದಲ್ಲಿ ಈಗ ಇರುವ ಪ್ರೌಢಶಾಲೆಯ ನಂತರ ಬಹಳಷ್ಟು ವಿದ್ಯಾರ್ಥಿಗಳು ಶಾಲೆ ಬಿಡುವಂತಾಗಿದ್ದು, ಅದರಲ್ಲಿ ವಿಶೇಷವಾಗಿ ಹೆಣ್ಣುಮಕ್ಕಳು ಬಹುತೇಕ ಶಾಲೆ ತೊರೆಯುತ್ತಿದ್ದಾರೆ. ಈಗ ಕಾಲೇಜು ಶಿಕ್ಷಣ ಪಡೆಯಲು ಸಿಂದಗಿ, ವಿಜಯಪುರಕ್ಕೆ ತೆರಳುವ ಅನಿವಾರ್ಯತೆಯಿದೆ. ಈಗ ಹುಣಶ್ಯಾಳ ಗ್ರಾಮದಲ್ಲಿ ಕಾಲೇಜು ಆರಂಭಗೊಂಡಿದ್ದೇಯಾದಲ್ಲಿ ಸುತ್ತಮುತ್ತಲಿನ ಗ್ರಾಮಗಳಾದ ಯುಲಗೋಡ, ಆಲಗೂರ, ಕೆರುಟಗಿ, ತುರಕನಗೇರಿ, ರಾಂಪೂರ, ಅಸಂತಾಪೂರ ಹೀಗೆ ಹಲವು ಗ್ರಾಮಗಳ ವಿದ್ಯಾರ್ಥಿನೀಯರಿಗೆ ಅನುಕೂಲವಾಲಿದೆ.

ಹುಣಶ್ಯಾಳ ಗ್ರಾಮದಲ್ಲಿ ಸರಕಾರಿ ಪದವಿಪೂರ್ವ ಕಾಲೇಜನ್ನು ಇದೇ ಶೈಕ್ಷಣಿಕ ವರ್ಷದಲ್ಲಿ ಮಂಜೂರು ಮಾಡುವುದರ ಮೂಲಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಗ್ರಾಮಸ್ಥರ ಬೇಡಿಕೆಗೆ ಸ್ಪಂದಿಸುವ ಭರವಸೆಯಿದೆ ಎಂದು ಗ್ರಾಮದ ಮೈನುದ್ದೀನ ಬಾಗವಾನ, ಶಫಿಕ ಸಿಪಾಯಿ. ಅನ್ವರ ಸಿಪಾಯಿ, ಅಸ್ಪಾಕ ತಾಳಿಕೋಟಿ, ಮಹಮ್ಮದ್ ಬಾಗವಾನ, ಶಕೀಲ ಪೋಲಾಸಿ, ಅಬ್ದುಲ್‌ಗನಿ ತಿಂಥಣಿ, ಮೊಹಸೀನ ಸಾಲೊಡಗಿ, ಹಾಶೀಂ ಸಿಪಾಯಿ, ಸದ್ದಾಂ ಬಿಂಜಲಭಾವಿ, ರಫಿಕ ನೀರಲಗಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ಪಾಲಕರು, ವಿದ್ಯಾರ್ಥಿಗಳು, ಮನವಿ ಮಾಡಿದ್ದಾರೆ.

# ಡೆಂಗ್ಯೂ ರೋಗ ನಿರ್ಮೂಲನೆಗೆ ಸಾರ್ವಜನಿಕರ ಸಹಕಾರ ಅಗತ್ಯ

**ಉದಯರಶ್ಮಿ ನ್ಯೂಸ್**



ವಿಜಯಪುರ: ಮುಂಜಾಗ್ರತ ಕ್ರಮವಾಗಿ ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಂಡು ಡೆಂಗ್ಯೂ ರೋಗದ ನಿರ್ಮೂಲನೆಗೆ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿಯಾದ ಡಾ.ಕೆ.ಡಿ. ಗುಂಡಬಾವಡಿ ಹೇಳಿದರು.

ಅವರು ಶುಕ್ರವಾರ ನಗರ ಸ್ಯಾಟಲೈಟ್ ಬಸ್‌ನಿಲ್ದಾಣದಲ್ಲಿ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಅಂಗವಾಗಿ "ಸಮುದಾಯದೊಂದಿಗೆ ಸೇರಿ ಡೆಂಗಿ ಜ್ವರವನ್ನು ನಿಯಂತ್ರಿಸೋಣ" ಎಂಬ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಮನೆಯ ಸುತ್ತಮುತ್ತ ಸ್ವಚ್ಛತೆಯನ್ನು ಕಾಪಾಡುವುದರಿಂದ ರೋಗಗಳಿಂದ ದೂರ ಇರಬಹುದು. ವ್ಯಯಕ್ತಿಕ ಸ್ವಚ್ಛತೆಯೊಂದಿಗೆ ಪರಿಸರದ ಸ್ವಚ್ಛತೆಗೂ ಆದ್ಯತೆ ನೀಡಿ ರೋಗ ಮುಕ್ತ ಸಮಾಜ ನಿರ್ಮಾಣ ಮಾಡಲು ಸಾರ್ವಜನಿಕರು ಪಣ ತೊಡಬೇಕು ಎಂದು ಕರೆ ನೀಡಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಯಾದ ಡಾ. ಜೈಬುನ್ನಿಸಾಬೇಗಂ ಬೀಳಗಿ ಮಾತನಾಡಿ, ಡೆಂಗ್ಯು ರೋಗವು ಈಡಿಸ್ ಈಜಿಪ್ತ ಹೆಣ್ಣು ಸೊಳ್ಳೆಯಿಂದ ಹರಡುತ್ತಿದ್ದು, ನಿಂತ ನೀರಿನಲ್ಲಿ ಈ ಸೊಳ್ಳೆಗಳು ಉತ್ಪತ್ತಿಯಾಘುತ್ತವೆ ಹಾಗಾಗಿ ಮನೆಯ ಸುತ್ತಮುತ್ತಲು ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.

ಜಾಥಾ ಕಾರ್ಯಕ್ರಮವು ನಗರದ ಸ್ಯಾಟಲೈಟ್ ಬಸ್‌ನಿಲ್ದಾಣ ಇಂದ ಆರಂಭಗೊಂಡು, ಗೋದಾವರಿ ವೃತ್ತ, ಶಾಸ್ತ್ರಿ ನಗರದ ಮುಖಾಂತರ ಮನೆ-ಮನೆಗೆ ತೆರಳಿ ಡೆಂಗ್ಯು ರೋಗ ಲಕ್ಷಣದ ಬಗ್ಗೆ ಕರಪತ್ರಗಳನ್ನು ಹಂಚಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ರಾಜೇಶ್ವರಿ ಗೋಲಗೇರಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಕವಿತಾ, ಡಿಟಿಒ ಅಧಿಕಾರಿ ಡಾ.ಅಪ್ಪಾಸಾಹೇಬ ಇನಾಂದಾರ, ತಾಲೂಕಾ ಆರೋಗ್ಯ ಅಧಿಕಾರಿ ಡಾ.ಪಿ.ಎಂ. ಹಿಟ್ನಳ್ಳಿ ಹಾಗೂ ಇಲಾಖೆಯ ಅಧಿಕಾರಿಗಳು ಹಾಗೂ ಕಚೇರಿಯ ಸಿಬ್ಬಂದಿ ಜಾಥಾ ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಐಸಿಎಸ್‌ಇ ಸಿಲೆಬಸ್ ನಲ್ಲಿ ಶಿವಶಂಕರ್ ರಾಜ್ಯಕ್ಕೆ 4ನೇ ಸ್ಥಾನ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ರಾಷ್ಟ್ರೀಯ ಬಸವ ಸೈನ್ಯ ಸಂಘಟನೆಯ ಮುಖಂಡ ದಯಾನಂದ ಜಾಲಗೇರಿ ಅವರ ಮಗ ಶಿವಶಂಕರ್ ಜಾಲಗೇರಿ ಅವರು 10ನೇ ತರಗತಿಯ ಐಸಿ-ಎಸ್‌ಇ ಸಿಲಬಸ್ ನಲ್ಲಿ ಶೇ.92 ರಷ್ಟು ಅಂಕ ಪಡೆದು ರಾಜ್ಯಕ್ಕೆ ನಾಲ್ಕನೇ ಸ್ಥಾನ ಪಡೆದುಕೊಂಡ ಹಿನ್ನೆಲೆಯಲ್ಲಿ ರಾಷ್ಟ್ರೀಯ ಬಸವ ಸೈನ್ಯ ಸಂಘಟನೆಯಿಂದ ಶಂಕರಗೌಡ ಬಿರಾದಾರ ಸನ್ಮಾನಿಸಿದರು.

ಶಿವಶಂಕರ ಜಾಲಗೇರಿ ಅವರು 10ನೇ ತರಗತಿಯ ಐಸಿ-ಎಸ್‌ಇ ಸಿಲಬಸ್ ನಲ್ಲಿ ರಾಜ್ಯಕ್ಕೆ ನಾಲ್ಕನೇ ಸ್ಥಾನ ಪಡೆದುಕೊಂಡ ಹಿನ್ನೆಲೆಯಲ್ಲಿ ರಾಷ್ಟ್ರೀಯ ಬಸವ ಸೈನ್ಯ ಸಂಘಟನೆಯಿಂದ ರಾಷ್ಟ್ರೀಯ ಬಸವ ಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಸನ್ಮಾನಿಸಿದರು.

ಶಂಕರಗೌಡ ಬಿರಾದಾರ ಮಾತನಾಡಿ, 10ನೇ ತರಗತಿಯ ಐಸಿಎಸ್‌ಇ ಸಿಲಬಸ್ ಪರೀಕ್ಷೆಯಲ್ಲಿ 600ಕ್ಕೆ 549 ಅಂಕ ಪಡೆದು ರಾಜ್ಯಕ್ಕೆ 4ನೇ ಸ್ಥಾನ ಪಡೆದು ಶೇ. 92 ಉತ್ತೀರ್ಣನಾಗಿರುವುದು ಬಸವನಾಡಿಗೆ ಹೆಮ್ಮೆಯ ಸಂಗತಿಯಾಗಿದೆ. ಈತನು ಸಂಡೂರ ವಸತಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದನು. ಮುಂಬರುವ ದಿನಗಳಲ್ಲಿ ಶಿವಶಂಕರನು ಉತ್ತಮ ವಿದ್ಯಾಭ್ಯಾಸ ಮಾಡಿ ಉನ್ನತ ಮಟ್ಟಕ್ಕೆ ಸಾಗಿ ಬಸವ ನಾಡಿಗೆ ಒಳ್ಳೆಯ ಹೆಸರನ್ನು ತರುವ ಕೆಲಸವನ್ನು ಮಾಡಬೇಕೆಂದರು.

ಈ ಸಂದರ್ಭದಲ್ಲಿ ಪಿಕೆಪಿ-ಎಸ್ ನಿರ್ದೇಶಕ ನಿಂಗಪ್ಪ ಅವಟಿ, ಮಹೇಶ ಮುಳವಾಡ, ರಾಮನಗೌಡ ಚಿಕ್ಕೊಂಡ, ಮಲ್ಲು ಬನಾಸಿ, ಮಹಾಂತೇಶ ಹೆಬ್ಬಾಳ, ವೆಂಕಟೇಶ ಕರಾಡೆ, ದಯಾನಂದ ಜಾಲಗೇರಿ, ಸದಾನಂದ ಸುಲಾಖೆ ಇತರರು ಇದ್ದರು.

# ಬಾವಿಯಲ್ಲಿ ಬಿದ್ದ ಎತ್ತಿನ ರಕ್ಷಣೆ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ವಡವಡಗಿ ಗ್ರಾಮದ ಪರಶುರಾಮ ದೊಡಮನಿ ತೋಟದ ಬಾವಿಯಲ್ಲಿ ಗುರುವಾರ ಆಕಸ್ಮಿಕವಾಗಿ ಶಿವಶಂಕ್ರೆಪ್ಪ ಅಂಬೇಕರ ಅವರ ಎತ್ತು ಬಿದ್ದಿತು. ಈ ಎತ್ತನ್ನು ಸ್ಥಳೀಯ ಅಗ್ನಿಶಾಮಕ ಠಾಣೆಯ ಸಿಬ್ಬಂದಿಗಳು ರಕ್ಷಣಾ ಕಾರ್ಯ ನಡೆಸಿ ಎತ್ತನ್ನು ಬಾವಿಯಿಂದ ಸುರಕ್ಷಿತವಾಗಿ ಮೇಲಕ್ಕೆ ತಂದರು. ಈ ಕಾರ್ಯಾಚರಣೆ ಸುಮಾರು ಮೂರು ಗಂಟೆ ಕಾಲ ನಡೆಯಿತು. ಬಾವಿಯಿಂದ ಸಿಬ್ಬಂದಿಗಳು ಸುರಕ್ಷಿತವಾಗಿ ಮೇಲಕ್ಕೆ ತಂದು ಎತ್ತಿನ ಮಾಲೀಕರಿಗೆ ಒಪ್ಪಿಸಿದರು. ರಕ್ಷಣಾ ಕಾರ್ಯಾಚರಣೆಯಲ್ಲಿ ಅಗ್ನಿಶಾಮಕ ಠಾಣೆಯ ಸಿಬ್ಬಂದಿಗಳಾದ ಬಸಪ್ಪ ಜಾಲಗೇರಿ, ನಾರಾಯಣ ರಾಠೋಡ, ಮಲ್ಲಿನಗೌಡ ಬಿರಾದಾರ, ಅಶೋಕ ನಾಯಕ, ಮುತ್ತಣ್ಣ ಲಮಾಣಿ, ನಾಗಪ್ಪ ಉಂಡಿ ಇದ್ದರು ಎಂದು ಅಗ್ನಿಶಾಮಕ ಠಾಣಾಧಿಕಾರಿ ಸಂಗಮೇಶ ಶಿವಪೂಜೆ ತಿಳಿಸಿದ್ದಾರೆ.

# ಸಿಎಂಗೆ ನೈತಿಕವಿಲ್ಲದ ಸಾಹಿತಿಗಳ ಪತ್ರ ನಾಚಿಗೇಡು :ಕಲ್ಯಾಣಶೆಟ್ಟಿ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಪ್ರಜ್ವಲ್ ಅವರನ್ನು ಬಂಧಿಸಬೇಕೆಂದು ನೈತಿಕತೆ ಇಲ್ಲದ ಸಾಹಿತಿಗಳು ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಪತ್ರ ಬರೆದಿರುವುದು ನಾಚಿಕೆಗೇಡಿನ ವಿಷಯವಾಗಿದೆ. ಜೀವನದಲ್ಲಿ ಆದರ್ಶವಿಲ್ಲದ ಎಡಚರ ಸಾಹಿತಿಗಳು ಈ ವಿಷಯದಲ್ಲಿ ಮೂಗು ತೂರಿಸುವ ಅವಶ್ಯಕತೆ ಇಲ್ಲ. ನಿಜವಾಗಲೂ ಈ ಬುದ್ದಿ ಜೀವಿ ಸಾಹಿತಿಗಳಿಗೆ ಸಮಾಜದ ಬಗ್ಗೆ ಕಳಕಳಿ ಇದ್ದರೆ ನೇಹಾ ಅವರ ಹತ್ಯೆಯನ್ನು ಖಂಡಿಸಬೇಕಾಗಿತ್ತು. ತಮಗೆ ಬೇಕಾದ ಹಾಗೆ ವರ್ತಿಸುತ್ತಿರುವ ಸಾಹಿತಿಗಳ ವರ್ತನೆ ಖಂಡನೀಯವಾಗಿದೆ. ಪ್ರಶಸ್ತಿ ಆಸೆಗಾಗಿ ಸರಕಾರದ ಪರವಾಗಿ ಸದಾ ಕೆಲಸ ಮಾಡುತ್ತಿರುವ ಈ ಬುದ್ಧಿಜೀವಿಗಳ ಬಗ್ಗೆ ಸಮಾಜದಲ್ಲಿ ಗೌರವವಿಲ್ಲ.. ಅಪರಾಧ ಮಾಡಿದವರ ಕುರಿತು ಕಾನೂನು ಕ್ರಮ ಸರ್ಕಾರ ಕೈಗೊಳ್ಳುತ್ತದೆ ಎನ್ನುವ ಸಾಮಾನ್ಯ ಜ್ಞಾನ ಇವರಿಗೆ ಇದ್ದಂತೆ ಇಲ್ಲ. ಸರಕಾರದ ಮೇಲೆ ಇವರಿಗೆ ವಿಶ್ವಾಸವಿಲ್ಲ ಎಂದು ತೋರುತ್ತದೆ. ಇಂತಹ ಸಾಹಿತಿಗಳಿಂದ ನಾವು ಏನನ್ನು ನಿರೀಕ್ಷಿಸುವುದಿಲ್ಲ. ಈಗಾಗಲೇ ಮೂಲೆಗುಂಪಾಗಿದ್ದಾರೆ. ತಮ್ಮ ಇರುವಿಕೆಯನ್ನು ವ್ಯಕ್ತಪಡಿಸುವ ಕಾರಣಕ್ಕಾಗಿ ಬಹುಶಃ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿರಬಹುದು ಎಂದು ಸಾಹಿತಿ ವಿವೇಕಾನಂದ ಕಲ್ಯಾಣಶೆಟ್ಟಿ

# ಬರ ಪರಿಹಾರದ ಹಣ ರೈತರ ಖಾತೆಗೆ ಜಮೆ :ನಾಯಕ

**ಉದಯರಶ್ಮಿ ನ್ಯೂಸ್**



ಇಂಡಿ: ತಾಲೂಕಿನಲ್ಲಿ ಒಟ್ಟು 42320 ಜನ ರೈತರಿಗೆ 64 ಕೋಟಿ 71 ಲಕ್ಷ 96795 ರೂ, ಗಳು ಮಂಜೂರಿಯಾಗಿದ್ದು, ರೈತರ ಖಾತೆಗಳಿಗೆ ಜಮೆ ಮಾಡಲಾಗಿದೆ ಎಂದು ತಹಸೀಲ್ದಾರ ಮಂಜುಳಾ ನಾಯಕ ತಿಳಿಸಿದ್ದಾರೆ.

ಅವರು ಪಟ್ಟಣದ ತಹಸೀಲ್ದಾರ ಕಚೇರಿಯ ಸಬಾಭವನದಲ್ಲಿ ನಡೆದ ಬೆಳೆ ಪರಿಹಾರ ಕುರಿತು ಅಧಿಕಾರಿಗಳು ಮತ್ತು ತಾಲೂಕಿನ ಎಲ್ಲ ಗ್ರಾಮ ಲೆಕ್ಕಾಧಿಕಾರಿಗಳ ಸಭೆಯಲ್ಲಿ ಮಾತನಾಡುತ್ತಿದ್ದರು.

ರೈತರಲ್ಲಿ ಕೆಲವು ರೈತರ ಖಾತೆಗಳು ಸ್ಥಗಿತಗೊಂಡಿವೆ, ಕೆಲವು ರೈತರ ಆಧಾರ ಕಾರ್ಡ್ ಬ್ಯಾಂಕ್ ಖಾತೆಗಳಿಗೆ ಲಿಂಕ್ ಇಲ್ಲದಿರುವದು, ಕೆಲವು ರೈತರ ಹೆಸರುಗಳು ಬ್ಯಾಂಕ್ ಖಾತೆಯಲ್ಲಿ ಮತ್ತು ಆಧಾರ ಕಾರ್ಡಗಳಲ್ಲಿ ಬೇರೆ ಬೇರೆಯಾಗಿರುವದು, ರೈತರು ಬೇರೆ ಕಡೆಗೆ ಹೋಗಿರುವದು, ತೀರಿ ಕೊಂಡಿರುವ ರೈತರ ಕುರಿತು ಬ್ಯಾಂಕಿನಲ್ಲಿ ಸಮಸ್ಯೆ ಇರಬಹುದು.

ಎನ್ ಪಿ ಸಿ ಐ ಮಾಡಿಸದಿರುವದು, ಇಂತಹ ಸಮಸ್ಯಗಳಿಂದ ಒಟ್ಟು ತಾಲೂಕಿನಲ್ಲಿ 3266 ರೈತರ ಖಾತೆಗಳಿಗೆ ಪರಿಹಾರದ ಹಣ ಜಮೆಯಾಗಿಲ್ಲ. ಈ ಬಗ್ಗೆ ರೈತರು ಭಯ ಪಡುವ ಅಗತ್ಯವಿಲ್ಲ. ಇಂತಹ ರೈತರು ಕೂಡಲೇ ತಮ್ಮ ತಮ್ಮ ಬ್ಯಾಂಕಗಳಿಗೆ ಭೇಟಿ ನೀಡಿ ಪರಿಹಾರದ ಹಣ ಏಕೆ ಜಮೆಯಾಗಿಲ್ಲ ಎನ್ನುವದನ್ನು ಕಂಡುಕೊಂಡು ಸಮಸ್ಯೆಗೆ ಪರಿಹಾರ ಒದಗಿಸಬೇಕು. ಹೀಗೆ ಮಾಡಿದ್ದಾದರೆ ಪರಿಹಾರದ ಹಣ ತಕ್ಷಣವೇ ಜಮೆಯಾಗುತ್ತವೆ ಎಂದು ಅವರು ತಿಳಿಸಿದರು.

ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಎಚ್.ಟಿ.ಪಾಟೀಲರು ಮಾತನಾಡಿ ರೈತರು ಬ್ಯಾಂಕ ಸಮಸ್ಯೆ ಹೊಂದಿರುವವರು ಅಂಚೆ ಕಚೇರಿಯಲ್ಲಿ ಹೊಸ ಅಕೌಂಟ ತೆಗೆದರೆ ಕೂಡಲೇ ಅವರ ಬೆಳೆ ಜಮೆ ಆಗುತ್ತದೆ ಎಂದರು.

ಇಂಡಿ ತಾಲ್ಲೂಕಿನಲ್ಲಿ ಕಳೆದ 2 ದಿವಸಗಳ ಹಿಂದೆಅಕಾಲಿಕ ಮಳೆ ಮತ್ತು ಗಾಳಿಯಿಂದ ಹಳಗುಣಕಿ, ಹೊರ್ತಿ, ಹಿರೇಬೇವನೂರ, ನೆಹರುನಗರ, ಚಿಕ್ಕಬೇವನೂರ, ಇಂಡಿ, ದೇಗಿನಾಳ, ಮಸಳಿ ಕೆಡಿ, ಬಸನಾಳ, ಆಳೂರ, ಲಚ್ಯಾಣ, ಬೈರುಣಗಿ ಮತ್ತು ಬೂದಿಹಾಳ ಗ್ರಾಮಗಳಲ್ಲಿ 1 ಹೆಕ್ಟರ್ ದ್ರಾಕ್ಷಿ, 1 ಹೆಕ್ಟರ್ ದಾಳಿಂಬೆ, 10.05 ಹೆಕ್ಟರ್ ನಿಂಬೆ, 2.40 ಹೆಕ್ಟರ್ ಬಾಳೆ ಬೆಳೆಗೆ ಹಾನಿಯಾಗಿದ್ದು, ಒಟ್ಟು ಸುಮಾರು 3 ಲಕ್ಷದಷ್ಟು ಹಾನಿಯಾಗಿದೆ. ಇದರಬಗ್ಗೆ ಸರ್ಕಾರಕ್ಕೆ ವರದಿ ಕಳಿಸಿಕೊಡಲಾಗಿದೆ ಎಂದು ತೋಟಗಾರಿಕಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಎಚ್.ಎಸ್.ಪಾಟೀಲ ಹೇಳಿದರು.


ವೇದಿಕೆಯ ಮೇಲೆ ರೇಷ್ಮೆ ಅಧಿಕಾರಿ ಅಶೋಕ ತೇಲಿ ಇದ್ದರು.

ಕಾರ್ಯಕ್ರಮದಲ್ಲಿ ಶಿರಸ್ತೆದಾರ ಎಸ್.ಆರ್.ಮುಜಗೊಂಡ, ಅಂಚೆ ಪಾಲಕ ಎಸ್. ಡಿ. ಬಿರಾದಾರ, ಕರ್ನಾಟಕ ಬ್ಯಾಂಕಿನ ಸಹಾಯಕ ವ್ಯವಸ್ಥಾಪಕ ರಾಮಯ್ಯ ಕಾಖಂಡಗಿ, ಉಪ ತಹಸೀಲ್ದಾರ ಎ.ಎಸ್. ಗೊಟ್ಯಾಳ, ಕಂದಾಯ ನಿರೀಕ್ಷಕ ಎಚ್.ಎಚ್.ಗುನ್ನಾಪುರ ಸೇರಿದಂತೆ ತಾಲೂಕಿನ ಎಲ್ಲ ಗ್ರಾಮ ಲೆಕ್ಕಾಧಿಕಾರಿಗಳು ಉಪಸ್ಥಿತರಿದ್ದರು.


# ಕಾಗೆಯ ಕೆಲ ಗುಣ ಅಳವಡಿಸಿಕೊಂಡರೆ ಯಶಸ್ಸು ಸಾಧ್ಯ

**ಉದಯರಶ್ಮಿ ದಿನಪತ್ರಿಕೆ**

– ಸಂತೋಷ್ ರಾವ್ ಪೆರ್ಮುಡ,
ಪೆರ್ಮುಡ ಮನೆ, ಪಟ್ರಮೆ ಗ್ರಾಮ
ಮತ್ತು ಅಂಚೆ ಬೆಳ್ತಂಗಡಿ ತಾಲೂಕು,



ಜಗತ್ತಿನಲ್ಲಿ ಹಲವು ವಿಧದ, ಬಣ್ಣದ, ರೂಪದ, ಗಾತ್ರದ ಪಕ್ಷಿಗಳಿದ್ದು, ಅವೆಲ್ಲದರ ಪೈಕಿ ಅತ್ಯಂತ ಹೆಚ್ಚು ಅನಾದರಕ್ಕೆ ಒಳಗಾದ ಪಕ್ಷಿಯೆಂದರೆ ಕಾಗೆ. ಬಣ್ಣದಲ್ಲಿ ಕಪ್ಪು, ಕೂಗಿನಲ್ಲಿ ಕರ್ಕಶ ಇವೆಲ್ಲಾ ಕಾರಣಗಳಿಂದ ಮನುಷ್ಯನಿಗೆ ಕಾಗೆಗಳೆಂದರೆ ಅಷ್ಟಕ್ಕಷ್ಟೇ. ಜಗತ್ತಿನ ಜೀವವಿಜ್ಞಾನಿಗಳು ಮತ್ತು ಮಹಾನ್ ಆಡಳಿತಗಾರನಾದ ಚಾಣಕ್ಯ ಹೇಳುವಂತೆ ಮನುಷ್ಯನು ಕಾಗೆಯನ್ನು ನೋಡಿಕೊಂಡು ಅದರಿಂದ ಕಲಿಯಬೇಕಾಗಿರುವುದು ಬಹಳಷ್ಟು ವಿಚಾರಗಳಿವೆ. ಅದರಲ್ಲೂ ಮುಖ್ಯವಾಗಿ ಕಾಗೆಯಲ್ಲಿ ಇರುವ ಯಶಸ್ಸಿನ ಗುಣಗಳನ್ನು ಎಲ್ಲರೂ ಕಲಿಯಲೇಬೇಕು. ಕಾಗೆಯಿಂದ



ಕಲಿಯಬೇಕಾದ ಮೊದಲನೆಯ ಗುಣವೆಂದರೆ ಎಲ್ಲೂ ಕಾಗೆಯು ಬಹಿರಂಗವಾಗಿ ಮಿಲನವನ್ನು ನಡೆಸುವುದಿಲ್ಲ ಮತ್ತು ಅದನ್ನು ತೀರಾ ಗುಪ್ತವಾಗಿರಿಸುತ್ತದೆ. ಮನುಷ್ಯ ಇದನ್ನು ಸರಿಯಾಗಿ ಅರಿತುಕೊಂಡರೆ ಮತ್ತು ಅದರ ಮೌಲ್ಯವನ್ನು ಅರಿತರೆ ಆತನಿಗೆ ಸಮಾಜದಲ್ಲಿ ಅಪಾರ ಗೌರವ ಪ್ರಾಪ್ತಿಯಾಗುತ್ತದೆ. 'ಅನ್ನದ ಅಗುಳೊಂದ ಕಂಡರೆ ಕೂಗಿ ಕರೆಯದೇ ಕಾಗೆಯೊಂದು ತನ್ನ ಬಳಗವನ್ನು' ಎಂಬ ಮಾತೇ ಇರುವಂತೆ ಕಾಗೆಯು ಒಂದು ತುತ್ತು ಆಹಾರ ಸಿಕ್ಕರೂ ಅದನ್ನು ತನ್ನ ಬಳಗದೊಂದಿಗೆ ಹಂಚಿಕೊಂಡು ತಿನ್ನುತ್ತದೆ. ಒಂದು ಅಗುಳು ಅನ್ನದ ಮೌಲ್ಯ ಹಾಗೂ ಹಸಿವಿನ ಬೆಲೆ ಕಾಗೆಗೆ ಚೆನ್ನಾಗಿ ತಿಳಿದಿದೆ. ಹಾಗಾಗಿ ತನಗೆ ಏನಾದರೂ ತಿನ್ನಲು ಸಿಕ್ಕರೆ ತಕ್ಷಣ ಅದು ತನ್ನ ಬಳಗವನ್ನೆಲ್ಲಾ ಕೂಗಿ ಕರೆದು ಅದನ್ನು ಹಂಚಿಕೊಂಡು ತಿನ್ನುತ್ತದೆ. ಆದರೆ ಮನುಷ್ಯನು ಸ್ವಾರ್ಥ ಜೀವಿಯಾಗಿದ್ದು, ತನಗೇನಾದರೂ ಸಿಕ್ಕರೆ ಅದು ತನಗೊಬ್ಬನಿಗೇ ಸೇರಬೇಕು ಎನ್ನುವ ಲಾಲಸೆಯ ಗುಣಕ್ಕೆ ಬದಲಾಗಿ ಎಲ್ಲರಿಗೂ



ಹಂಚಿ ತಿನ್ನುವಂತಹ ವಿಭಿನ್ನವಾದ ಗುಣವನ್ನು ಹೊಂದಬೇಕು.

ಕಾಗೆಯ ಇನ್ನೊಂದು ವಿಶೇಷ ಗುಣವೆಂದರೆ ತನ್ನ ಶತ್ರುಗಳು ಯಾರಾದರೂ ತನ್ನ ಮೇಲೆ, ತನ್ನ ಮನೆಯ ಮೇಲೆ ಅಥವಾ ತನ್ನ ಕುಟುಂಬದ ಮೇಲೆ ಧಾಳಿಯನ್ನು ಮಾಡಿದರೆ ಅಥವಾ ಧಾಳಿ ಮಾಡುವ ಮುನ್ಸೂಚನೆ ದೊರೆತರೆ ಶತ್ರುಗಳ ಮೇಲೆ ಏಕಾಂಗಿಯಾಗಿಯೂ ಪ್ರತಿಯಾಗಿ ಧಾಳಿ ನಡೆಸಿ ಅವರನ್ನು ಬಿಟ್ಟೂಬಿಡದೆ ಕಾಡಿ ಹೈರಾಣಾಗಿಸುತ್ತದೆ. ತನ್ನ ಹಾಗೂ ತನ್ನ ಕುಟುಂಬದ ರಕ್ಷಣೆಗೆ ತನಗೆ ಅಪಾಯವಿದ್ದರೂ ಕಾಗೆಯು ಭಿತಿಗೊಳ್ಳದೇ ಧೈರ್ಯದಿಂದ ಎದುರಾಳಿಯನ್ನು ಹಿಮ್ಮೆಟ್ಟಿಸುತ್ತದೆ. ಮನುಷ್ಯನೂ ಬದುಕಲ್ಲಿ ಎಂತಹ ಪರಿಸ್ಥಿತಿ ಬಂದರೂ ಧೈರ್ಯದಿಂದ ಅದನ್ನು ಎದುರಿಸುವಂತಹ ಮನೋಧೈರ್ಯವನ್ನು ಹೊಂದಬೇಕು. ಅದೇ ರೀತಿ ಕಾಗೆಯಲ್ಲಿರುವ ಮತ್ತೊಂದು ಗುಣವೆಂದರೆ ತನ್ನ ಬಳಿ ಇರುವ ಯಾವುದೇ ವಸ್ತುಗಳನ್ನು ಅದು ಬಹಳ ಜಾಗರೂಕತೆಯಿಂದ ಕಾಪಾಡಿಕೊಳ್ಳುತ್ತದೆ. ಕಾಗೆಯು ಯಾವುದೇ ವಸ್ತುವೂ ವ್ಯರ್ಥವಾಗಿ ಹಾಳಾಗಬಾರದು ಎಂದು ಅದನ್ನು ಅತ್ಯಂತ ಜತನದಿಂದ ಕಾಪಾಡಿಕೊಳ್ಳುತ್ತದೆ. ಅದೇ ರೀತಿ ಮನುಷ್ಯನೂ ಯಾವುದೇ ವಸ್ತುವನ್ನು ನಿರುಪಯುಕ್ತವೆಂದು ಕಸದ ಬುಟ್ಟಿಗೆ ಎಸೆಯುವ ಮೊದಲು ಹಲವು



ಬಾರಿ ಯೋಚಿಸಬೇಕು ಮತ್ತು ಅದರ ಮರುಬಳಕೆಯ ಕುರಿತು ಕಾಳಜಿವಹಿಸಬೇಕು.

ಕಾಗೆಯು ಮತ್ತೊಂದು ಅದ್ಭುತವಾದ ಗುಣವೆಂದರೆ ಅದು ಯಾವತ್ತೂ ಮೈಮರೆತು ಇರದೇ ಸದಾ ಜಾಗೃತ ಸ್ಥಿತಿಯಲ್ಲಿ ಇರುತ್ತದೆ. ತನ್ನ ಮೇಲೆ ಯಾವ ದಿಕ್ಕಿನಿಂದ ಆಕ್ರಮಣ ನಡೆದರೂ ಅದನ್ನು ಎದುರಿಸಲು ಸದಾ ಜಾಗೃತ ಸ್ಥಿತಿಯಲ್ಲೇ ಇರುತ್ತದೆ ಮತ್ತು ತನ್ನ ಶತ್ರುಗಳ ಬಗ್ಗೆ ಬಹಳ ಎಚ್ಚರಿಕೆಯಿಂದ ಇರುತ್ತದೆ. ಅದೇ ರೀತಿ ಮನುಷ್ಯನು ತನ್ನ ಸುತ್ತಮುತ್ತ ಇರುವ ಶತ್ರುಗಳು ಮತ್ತು ಸ್ನೇಹಿತರ ಕುರಿತು ಎಚ್ಚರಿಕೆಯಿಂದ ಇರಬೇಕು. ಕಾಗೆಯು ಯಾರನ್ನೂ ಅತಿಯಾಗಿ ನಂಬದೇ ಇರುವ ಪಕ್ಷಿ, ಕಾಗೆಯು ತನಗೆ ತಾನೆ ಸಾಟಿ ಎನ್ನುವಂತೆ ಸ್ವಸಾಮರ್ಥ್ಯವನ್ನು ನಂಬಿಕೊಂಡು ಜೀವಿಸುತ್ತದೆ. ಮನುಷ್ಯನೂ ಇದೇ ರೀತಿ ಎಲ್ಲಾ ವಿಚಾರಗಳಲ್ಲೂ ತನ್ನ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಬೇಕು ಮತ್ತು ಈ ವಿಶಿಷ್ಟ ಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಯಶಸ್ಸಿನೆಡೆಗೆ ಸಾಗಬಹುದು.


# ವಿಶೇಷಚೇತನ ವಿದ್ಯಾರ್ಥಿಗಳಿಂದ ಡಿಪ್ಲೋಮಾ ಕೋರ್ಸ್ ಗೆ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: 2024-25ನೇ ಸಾಲಿಗೆ ಮೈಸೂರಿನ ಜೆಎಸ್‌ಎಸ್ ಮಹಾವಿದ್ಯಾಪೀಠದ ಕರ್ನಾಟಕ ಸರ್ಕಾರದದಿಂದ ಅನುದಾನ ಪಡೆದ ಹಾಗೂ ಎಐಸಿಟಿಯ ಮಾನ್ಯತೆ ಪಡೆದ ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಕಾಲೇಜು ವತಿಯಿಂದ ಡಿಪ್ಲೋಮಾ ಕೋರ್ಸ್ ಗೆ ವಿಶೇಷಚೇತನ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅನುದಾನಿತ ಕೋರ್ಸ್ ಗಳಾದ ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಶಿಯಲ್ ಪ್ರಾಕ್ಟೀಸ್, ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿಯರಿಂಗ, ಹಾಗೂ ಅನುದಾನ ರಹಿತ ಕೋರ್ಸ್ಗಳಾದ ಜ್ಯುಯಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್(ಫಾರ್ ವಿಜ್ಯುವಲಿ ಇಂಪರ್ಡ್)ಮ ಅಪಾರೇಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ ಕೋರ್ಸ್ಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಎಸ್‌ಎಸ್‌ಎಲ್‌ಸಿಯಲ್ಲಿ ಕನಿಷ್ಠ ಶೇ.35 ಅಂಕಗಳನ್ನು ಪಡೆದಿರಬೇಕು. ವಿಶೇಷಚೇತನ ಪ್ರಮಾಣಪತ್ರವನ್ನು ಒಳಗೊಂಡಿರಬೇಕು. ಪ್ರವೇಶಕ್ಕೆ ಅರ್ಜಿಗಳನ್ನು ನಗದು ಅಥವಾ ಡಿಡಿಯ ಮೂಲಕ ಶುಲ್ಕ ಪಾವತಿಸಿ(ಸಾಮನ್ಯ ವರ್ಗದ ಅಭ್ಯರ್ಥಿಗಳಿಗೆ 100ರೂ. ಎಸ್ಸಿ,ಎಸ್ಟಿ, ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ 50ರೂಪಾಯಿ) ಜೆಎಸ್‌ಎಸ್ ವಿಶೇಷಚೇತನರ ಕಾಲೇಜುನಿಂದ ಪಡೆದುಕೊಳ್ಳಬಹುದು. ಅಥವಾ ಸಂಸ್ಥೆಯ ವೆಬ್‌ಸೈಟ್ ತಿತಿತಿ.ಛಿಜಚಿ.ಡಿಡಿ ನಿಂದ ಡೌನ್ಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ವೆಬ್‌ಸೈಟ್ ಅಥವಾ 9844644937 ಸಂಖ್ಯೆಗೆ ಕರೆ ಮಾಡಬಹುದು ಎಂದು ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಯುಜಿಡಿ ಸಂಸ್ಕರಣಾ ಘಟಕದಲ್ಲಿ ಮಕ್ಕಳ ಸಾವು ಪ್ರಕರಣ । ಘಟನಾ ಸ್ಥಳಕ್ಕೆ ಮಕ್ಕಳ ಆಯೋಗದ ಸದಸ್ಯರ ಭೇಟಿ

# ಮಹಾನಗರ ಪಾಲಿಕೆ ಅಧಿಕಾರಿಗಳ ನಿರ್ಲಕ್ಷಕ್ಕೆ ಕೊಸಂಬೆ ಆಕ್ರೋಶ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ವಿಜಯಪುರ ನಗರದ ಗಚ್ಚಿನಕಟ್ಟಿ ಕಾಲೋನಿಯ ಮನೆಯಿಂದ ಮೂವರು ಮಕ್ಕಳು ಕಾಣೆಯಾಗಿ ಮೇ 13 ರಂದು ಇಂಡಿ ರಸ್ತೆಯಲ್ಲಿರುವ ಯುಜಿಡಿ ತ್ಯಾಜ್ಯ ಸಂಸ್ಕರಣ ಘಟಕದ ಕಾಲುವೆಯಲ್ಲಿ ಶವವಾಗಿ ಪತ್ತೆಯಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಘಟನಾಸ್ಥಳಕ್ಕೆ ಶುಕ್ರವಾರ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯ ಶಶಿಧರ್ ಕೊಸಂಬೆ ಹಾಗೂ ಶೇಖರಗೌಡ ರಾಮತನಾಳ ಭೇಟಿ ನೀಡಿ ಘಟಕದಲ್ಲಿ ರಕ್ಷಣಾ ವ್ಯವಸ್ಥೆಯ ಸ್ಥಿತಿಗತಿಗಳನ್ನು ಪರಿಶೀಲಿಸಿ, ಮೃತಪಟ್ಟ ಮಕ್ಕಳ ಪೋಷಕರಿಗೆ ಸಾಂತ್ವನ ಹೇಳಿದರು.

ಯುಜಿಡಿ ಮಲಿನ ನೀರು ಸಂಸ್ಕರಣಾ ಘಟಕದಲ್ಲಿ ಖುದ್ದು ಪರೀಶೀಲನೆ ನಡೆಸಿದ ಆಯೋಗದ ಸದಸ್ಯ ಕೋಸಂಭೆ ಹಾಗೂ ರಾಮತನಾಳ ಅವರು, ಮುಖ್ಯರಸ್ತೆಗೆ ಹೊಂದಿಕೊಂಡಿರುವ ಘಟಕದ ಸುತ್ತಲ್ಲೂ ಯಾವುದೇ ತಂತಿಬೇಲಿ, ತಡೆಗೋಡೆ ನಿರ್ಮಿಸದಿರುವುದು, ಕನಿಷ್ಠ ಸುರಕ್ಷತಾ ಕ್ರಮಗಳನ್ನು ಪಾಲಿಸದಿರುವುದು ಹಾಗೂ ಸೂಕ್ತ ಸಿಬ್ಬಂದಿ ನಿಯೋಜಿಸದ ಮಹಾನಗರ



ಪಾಲಿಕೆ ಅಧಿಕಾರಿಗಳ ನಿರ್ಲಕ್ಷಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಮೂರು ಮಕ್ಕಳ ಸಾವಿಗೆ ಪಾಲಿಕೆ ಅಧಿಕಾರಿಗಳ ನಿರ್ಲಕ್ಷವೇ ಕಾರಣ ಎಂದು ಗರಂ ಆದರು.

ಈ ವೇಳೆ ಸ್ಥಳದಲ್ಲಿದ್ದ ಸುದ್ದಿಗಾರರೊಂದಿಗೆ ಆಯೋಗದ ಸದಸ್ಯ ಶಶಿಧರ್ ಕೋಸಂಭೆ ಮಾತನಾಡಿ, ಒಂದು ವಾರದಲ್ಲಿ ಸಂಸ್ಕರಣಾ ಘಟಕದ ಸುತ್ತಲೂ ತಂತಿ ಬೇಲಿ ಹಾಗೂ ಗೇಟ್ ಹಾಕಿ ಸಿಸಿ ಕ್ಯಾಮೆರಾ ಅಳವಡಿಸಬೇಕು. ಸೂಕ್ತ ಸಿಬ್ಬಂದಿ ನಿಯೋಜಿಬೇಕು. ಮೃತ ಮಕ್ಕಳ ಕುಟುಂಬಕ್ಕೆ ಪಾಲಿಕೆಯಿಂದ ತ್ವರಿತ ಹಾಗೂ ಗರಿಷ್ಠ ಆರ್ಥಿಕ ಪರಿಹಾರ ನೀಡಬೇಕೆಂದು ಮಹಾನಗರ ಪಾಲಿಕೆ ಅಧಿಕಾ–ರಿಗಳಿಗೆ ಸೂಚನೆ ನೀಡಿದ್ದೇನೆ. ಒಂದು ವಾರದ ಒಳಗೆ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳದಿದ್ದರೆ ಪಾಲಿಕೆ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಇಲಾಖೆಯ ಉನ್ನತ ಅಧಿಕಾರಿಗಳಿಗೆ ಆಯೋಗ ಶಿಫಾರಸ್ಸು ಮಾಡಲಿದೆ. ಅಲ್ಲದೇ ಈ ಕುರಿತು ಸರ್ಕಾರಕ್ಕೂ ವರದಿ ಸಲ್ಲಿಸಲಾಗುತ್ತದೆ. ಅಲ್ಲದೇ ಪ್ರಕರಣ ಕುರಿತು ಮಕ್ಕಳ ಆಯೋಗದಿಂದ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿದ್ದೇವೆ. ಸಂತ್ರಸ್ತ ಕುಟುಂಬಕ್ಕೆ ಸೂಕ್ತ ನ್ಯಾಯ ಕೊಡಿಸುವ ನಿಟ್ಟಿನಲ್ಲಿ ಆಯೋಗ ಬದ್ಧವಾಗಿದೆ ಎಂದು ತಿಳಿಸಿದರು.

ಆಯೋಗದ ಇನ್ನೋರ್ವ ಸದಸ್ಯ ಶೇಖರಗೌಡ ರಾಮತನಾಳ ಮಾತನಾಡಿ, ಸ್ಥಳೀಯರ ಒತ್ತಾಯ ಹಾಗೂ ಮಕ್ಕಳ ಸಾವಿನ ಘಟನೆ ಗಮನಿಸಿದರೆ ನಗರದ ಮಧ್ಯಭಾಗದಲ್ಲಿರುವ ಈ ಯು–ಜಿಡಿ ತ್ಯಾಜ್ಯ ನೀರು ಸಂಸ್ಕರಣಾ ಘಟಕವನ್ನು ಬೇರೆಡೆ ಸ್ಥಳಾಂತರ ಮಾಡುವುದು ಸೂಕ್ತ. ಈ ಬಗ್ಗೆ ಪಾಲಿಕೆ ಅಧಿಕಾರಿಗಳಿಗೆ ಚರ್ಚಿಸಲು ಸೂಚಿಸುತ್ತೇವೆ ಎಂದರು.

ಇದೇ ಸಂದರ್ಭದಲ್ಲಿ ಆಯೋಗದ ಸದಸ್ಯರಾದ ಶಶಿಧರ ಕೋಸುಂಬೆ ಹಾಗೂ ಶೇಖರಗೌಡ ರಾಮತನಾಳ ಸ್ಥಳದಲ್ಲಿದ್ದ ಮೃತ ಮಿಹಿರ್ ಮಗುವಿನ ತಂದೆ ಶ್ರೀಕಾಂತ್ ಜನಗೌಳಿ ಹಾಗೂ ಕುಟುಂಬ ಸದಸ್ಯರನ್ನು ಭೇಟಿ ಮಾಡಿ ಸಾಂತ್ವಾನ ಹೇಳಿದರು. ಮೂವರು ಮಕ್ಕಳ ಸಾವು ಪ್ರಕರಣ ಇಡಿ ನಾಗರಿಕ ಸಮಾಜ ತಲೆ ತಗ್ಗಿಸುವಂತಹದು. ಪಾಲಿಕೆ ವತಿಯಿಂದ ಗರಿಷ್ಠಮಟ್ಟದ ಆರ್ಥಿಕ ಪರಿಹಾರ ನೀಡಲು ಅಧಿಕಾ–ರಿಗಳಿಗೆ ಸೂಚನೆ ನೀಡಿದ್ದೇನೆ. ಆಯೋಗವು ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡಿದ್ದು, ಆಯೋಗ ಸದಾ ನಿಮ್ಮೊಂದಿಗಿರುತ್ತದೆ ಎಂದು ಕುಟುಂಬ ಸದಸ್ಯರಿಗೆ ಸೂಕ್ತ ನ್ಯಾಯ ಕೊಡಿಸುವ ಭರವಸೆ ವ್ಯಕ್ತಪಡಿಸಿದರು.

ಈ ವೇಳೆ ವಿಜಯಪುರ ಮಹಾನಗರ ಪಾಲಿಕೆ ಆಯುಕ್ತರು, ಪಾಲಿಕೆ, ಆರೋಗ್ಯ, ಪೊಲೀಸ್ ಇಲಾಖೆಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸೇರಿದಂತೆ ವಿವಿಧ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

1ನೆ ಪುಟದಿಂದ : ತೆಲಂಗಾಣಕ್ಕೆ ನೀರು ಹರಿಸುವುದನ್ನು ಸ್ಥಗಿತಗೊಳಿಸಲು ರೈತಸಂಘ ಆಗ್ರಹ

ಜಲಾಶಯಕ್ಕೆ ನೀರು ಹರಿಸಲು ಆರಂಭಿಸಿದ್ದಾರೆ. ಇದರಿಂದ ಜಿಲ್ಲೆಯ ರೈತರು ಕುಡಿಯುವ ನೀರಿಗಾಗಿ ಪರದಾಡುವ ಪರಸ್ಥಿತಿ ನಿರ್ಮಾಣವಾಗಿದೆ. ಕೆಲ ದಿನಗಳ ಹಿಂದೆ ವಿಜಯಪುರ ಜಿಲ್ಲಾಧಿಕಾರಿಗಳು ಕುಡಿಯುವ ನೀರಿಗಾಗಿ ಕೆರೆಗಳನ್ನು ತುಂಬಿಸಲು ಅನುಮತಿ ನೀಡುವಂತೆ ಪ್ರಾದೇಶಿಕ ಆಯುಕ್ತರಿಗೆ ಪತ್ರ ಬರೆದಿದ್ದರು ಆಯುಕ್ತರ ಆದೇಶದ ಮೇರೆಗೆ ಆಲಮಟ್ಟಿ ಲಾಲ ಬಹದ್ದೂರ ಜಲಾಶಯದ ವ್ಯಾಪ್ತಿಯ ಕೆರೆಗಳನ್ನು ತುಂಬಿಸಲು ನೀರು ಹರಿಸಲಾಗುತ್ತಿದೆ.

ಆದರೆ ಬಸವಸಾಗರ ಜಲಾಶಯದ ವ್ಯಾಪ್ತಿಯಲ್ಲಿ ತೆಲಂಗಾಣ ಮೂಲದ ಕೆಲವು ರೈತರು ಬಾಡಿಗೆ ಆದ–ಾರದಲ್ಲಿ ನಮ್ಮ ರೈತರ ಜಮೀನು ಪಡೆದು ಅದರಲ್ಲಿ ನಿಷೇದಿತ ಬೆಳೆಗಳನ್ನು ಬೆಳೆದಿದ್ದಾರೆ.

ಈಗ ಅವರಿಗೆ ನೀರು ಬೇಕಾಗಿದ್ದರಿಂದ ರಾಜ–ಕೀಯ ಒತ್ತಡ ಹೇರಿ ನೀರು ಬಿಡಿಸಿಕೊಂಡಿದ್ದಾರೆ.

ರಾಜ್ಯದಲ್ಲಿ ಭೀಕರ ಬರಗಾಲವಿದ್ದರಿಂದ ಈ ರ್ಷ ಯಾವ ಜಲಾಶಯಗಳೂ ಸಂಪೂರ್ಣ ಭರ್ತಿಯಾಗಿರಲಿಲ್ಲ ಆದರೆ ಅದೃಷ್ಟವಶಾತ್ ಮಹಾರಾಷ್ಟ್ರದಲ್ಲಿ ಮಳೆಯಾದ ಪರಿಣಾಮ ಆಲಮಟ್ಟಿ ಜಲಾಶಯ ತುಂಬಿದ್ದರೂ ವಿಜಯಪುರ ಜಿಲ್ಲೆಯ ರೈತರು ಬೆಳೆದ ಹಿಂಗಾರು ಬೆಳೆಗಳಿಗೆ ನೀರು ಕೊಡಲಿಲ್ಲ ಈ ಭಾರಿ ಬೇಸಿಗೆ ಬಿಸಲಿನ ಪ್ರಖರತೆ ಹೆಚ್ಚಿಗೆ ಇರುವದರಿಂದ ಜಿಲ್ಲೆಯ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ತತ್ವಾರ ಎದುರಾಗಿದೆ . ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರದ ಬಸವಸಾಗರ ಡ್ಯಾಂ ನಿಂದ ಕೃಷ್ಣಾ ನದಿ ಮೂಲಕ ತೆಲಂಗಾಣಕ್ಕೆ ನೀರು ಹರಿಸಲಾಗುತ್ತಿದೆ. ಆರ್.ಟಿ.ಪಿ.ಎಸ್.ಗೆ ನೀರು ಹರಿಸುವ ನೆಪದಲ್ಲಿ ತೆಲಂಗಾಣಕ್ಕೆ ನೀರು ಬಿಡಲಾಗುತ್ತಿದೆ ಶಾಸ್ತ್ರಿ ಜಲಾಶಯದಲ್ಲಿ ನೀರು ಇಲ್ಲವೆಂದು ರೈತರ ಬೆಳೆಗೆ ನೀರು ಕೊಡದ ಸರ್ಕಾರ ಈಗ ತೆಲಂಗಾಣಕ್ಕೆ ನೀರು ಹರಿಸಲಾಗುತ್ತಿದೆ. ನಮ್ಮ ಜಿಲ್ಲೆಯ ರೈತರಿಗೆ ನೀರು ಇಲ್ಲದ ಸಂದರ್ಭದಲ್ಲಿ ನಾರಾಯಣಪುರಕ್ಕೆ ನೀರು ಹರಿಸಿ ರಾಜ್ಯ ಸರ್ಕಾರ. ವಿಜಯಪುರ ಜಿಲ್ಲೆಯ ರೈತರಿಗೆ ಮೋಸ ಮಾಡುತ್ತಿದೆ ಕೂಡಲೇ ನಾರಾಯಣಪುರ ಜಲಾಶಯಕ್ಕೆ ಕೆ.ಪಿ.ಸಿ.ಎಲ್ ಮೂಲಕ ಹರಿಸುತ್ತಿರುವ ನೀರನ್ನು ಬಂದ್ ಗೊಳಿಸಬೇಕು ಇಲ್ಲದಿದ್ದರೆ ಅಖಂಡ ಕರ್ನಾಟಕ ರೈತ ಸಂಘದ ವತಿಯಿಂದ ಉಗ್ರ ಹೋರಾಟ ನಡೆಸಬೇಕಾಗುತ್ತದೆಂದು ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಅಖಂಡ ಕರ್ನಾಟಕ ರೈತ ಸಂಘ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅರವಿಂದ. ಕೆ.ಕುಲಕರ್ಣಿ, ಚನ್ನಪ್ಪ ರಾಠೋಡ, ಸೋಮು ಚೌವ್ಹಾಣ, ರಾಜು ರಾಠೋಡ, ಭೀರು ಇಂಡಿ, ರಮೇಶ ಕುಲಕರ್ಣಿ, ಸಂಜು ಕುಲಕರ್ಣಿ, ಗುರುರಾಜ ದೇಶಪಾಂಡೆ ಇತರರು ಇದ್ದರು

# ಅಮ್ಮ ಪ್ರತಿಯೊಬ್ಬರ ಬದುಕಿನ ಸ್ಫೂರ್ತಿ :ಪವಿತ್ರಾ ಅಕ್ಕ

ಉದಯರಶ್ಮಿ ನ್ಯೂಸ್

ವಿಜಯಪುರ: ಅಮ್ಮ ಎಂದರೆ ಮಮತೆಯ ಕಡಲು, ಸ್ವಾಭಿಮಾನದ ಪ್ರತೀಕ ಪ್ರತಿಯೊಬ್ಬರ ಬದುಕಿನ ಸ್ಫೂರ್ತಿ ಎಂದು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಪವಿತ್ರಾ ಅಕ್ಕನವರು ಹೇಳಿದರು



ಜಿಲ್ಲೆಯ ಸಿಂದಗಿ ಪಟ್ಟಣದ ಲಿಟಲ್ ವಿಂಗ್ಸ್ ಶಾಲೆಯ ವತಿಯಿಂದ ಜ್ಯೋತಿ ಮಂಗಲ ಕಾರ್ಯಾಲಯದಲ್ಲಿ ಹಮ್ಮಿಕೊಂಡ ವಿಶ್ವ ತಾಯಂದಿರ ದಿನದ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಮಾತನಾಡಿದ ಅವರು ತಾಯಿಯು ಮಮತೆಯ ಆಗರ ಕರುಣೆಯ ಕಡಲು ,ಪ್ರೀತಿಯ ಸೆಲೆಯಾಗಿದ್ದಾಳೆ. ತಾಯಿಯ ಜಗತ್ತಿನ ಸರ್ವ ಶ್ರೇಷ್ಠ ವ್ಯಕ್ತಿಯಾದ ಅಮ್ಮನಿಗೆಂದೇ ಕೇವಲ ಒಂದು ವಿಶೇಷ ದಿನವನ್ನು ಮೀಸಲಿಟ್ಟರೆ ಸಾಲದು ಅದು ನಿತ್ಯ ನಿರಂತರವಾಗಿರಬೇಕು ಎಂದರು.

ಈ ಸಂದರ್ಭದಲ್ಲಿ ಅತಿಥಿಯಾಗಿ ಮಾತನಾಡಿದ ಶಕುಂತಲಾ ಹಿರೇಮಠ, ಇಡೀ ಜೀವನವನ್ನೇ ಮಕ್ಕಳಿಗಾಗಿ ಬಂಧು ಬಳಗಕ್ಕಾಗಿ ಮೀಸಲಿಡುವ ಅಮ್ಮನ ಪ್ರೀತಿ ಕಾಳಜಿ ತ್ಯಾಗಕ್ಕೆ ಕೃತಜ್ಞತೆ ಸಲ್ಲಿಸಲು ಅಮ್ಮನ ಮಮತೆಯನ್ನು ಸ್ಮರಿಸುವ ದಿನವಿದು. ಅವಳ ಋಣವನ್ನು ಎಷ್ಟು ಜನ್ಮವೆತ್ತಿ ಬಂದರೂ ತೀರಿಸಲಾಗದು ಎಂದರು.

ಮಹಾನಂದ ಹಿರೇಮಠ ಕಾರ್ಯಕ್ರಮ ಉದ್ಘಾಟಿಸಿದರು. ಸಂಸ್ಥೆ ನಿರ್ದೇಶಕಿ ಭಾರತಿ ಚೌದರಿ ಅಧ್ಯಕ್ಷತೆ ವಹಿಸಿದ್ದರು. ಪಾಲಕರ ಪ್ರತಿನಿಧಿಯಾಗಿ ಕಾವೇರಿ ಮಲ್ಲೇವಾಡಿ, ಶಿವಮ್ಮ ಮುಂಡೇವಾಡಗಿ ವೇದಿಕೆ ಮೇಲಿದ್ದರು

ಪೂಜಾ ಗಾಯಕವಾಡ ಸ್ವಾಗತಿಸಿದರು. ಪ್ರಿಯಾಂಕ ಹೊಸಮನಿ ನಿರೂಪಿಸಿದರು. ನಗ್ಮಾ ಪಾಟೀಲ ವಂದಿಸಿದರು

ಈ ಸಂದರ್ಭದಲ್ಲಿ ಭಾರತಿ ಜೋಗೂರ, ನಾಗರೇಖಾ, ಅಭಿಷೇಕ್ ಚೌಧರಿ, ಪ್ರದೀಪ ಹಿರೇಮಠ, ಸೌಜನ್ಯ ಪೂಜಾರಿ, ಪೂಜಾ ಜೋಶಿ, ಆರತಿ ಜೋಶಿ, ಮಂಜುಳಾ ಚೌದರಿ, ಮಹಾನಂದಾ ದೇವಪುರೆ, ಲಕ್ಷ್ಮಿ ಬೂದಿಹಾಳ, ಭಾಗೀರಥಿ ಪಾಟೀಲ, ಶೇತಾ ಭೈರಿ, ಉಮಾ ವಾರದ ರೋಹಿಣಿ ಬಳಗಾನೂರ, ಡಾ. ಸೈದಾ ನಸರಿನ್, ಎಸ್ ಎಸ್ ಪಾಟೀಲ, ಶೃತಿ ಬಿರಾದಾರ, ಬಸವರಾಜ ಬಿರಾದಾರ, ರಾಹುಲ ನಾರಾಯಣ–ಕರ, ಸಂತೋಷ ಇಂಗಳೆ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಡಿಎಚ್‌ಓ ಅವರನ್ನು ತರಾಟೆಗೆ ತೆಗೆದುಕೊಂಡ ಮಕ್ಕಳ ಆಯೋಗದ ಸದಸ್ಯ ಶಶಿಧರ ಕೋಸಂಬೆ

# ಭ್ರೂಣ ಪತ್ತೆ ಪ್ರಕರಣ :ಕ್ರಮ ಕೈಗೊಳ್ಳದ ಇಲಾಖೆ

ಉದಯರಶ್ಮಿ ನ್ಯೂಸ್



ಮುದ್ದೇಬಿಹಾಳ: ವಿಜಯಪುರ ಜಿಲ್ಲೆಯಲ್ಲಿ ಕೆಲ ಹೆರಿಗೆತಜ್ಞ ಆಸ್ಪತ್ರೆಗಳಲ್ಲಿ ಪ್ರಸವಪೂರ್ವ ಲಿಂಗ ಪತ್ತೆ ಮಾಡಲಾಗುತ್ತಿದೆ ಎಂಬ ಆರೋಪಗಳ ಹಿನ್ನೆಲೆ ಅಂತಹ ಆಸ್ಪತ್ರೆಗಳ ವಿರುದ್ಧ ಕಾನೂನು ಕ್ರಮ ಜರುಗಿಸಲು ರಾಜ್ಯ ಮಕ್ಕಳ ಹಕ್ಕುಗಳ ಆಯೋಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾ–ರಿಗಳ ಕಚೇರಿಗೆ ಸೂಚನೆಗಳನ್ನ ನೀಡಿದರೂ ಸಂಬಂಧಪಟ್ಟ ಇಲಾಖೆ ಕ್ರಮ ಕೈಗೊಳ್ಳಲು ವಿಳಂಬ ಮಾಡಿದೆ. ಅಲ್ಲದೇ ಅಂತಹ ಆರೋಪ ಕೇಳಿಬಂದ ಆಸ್ಪತ್ರೆಗಳ ಸ್ಕ್ಯಾನಿಂಗ್ ಸೆಂಟರ್ ಮಾತ್ರ ಸೀಜ್ ಮಾಡಿದ್ದು ಸರಿಯಾದ ಕ್ರಮವಲ್ಲ ಎಂದು ರಾಜ್ಯ ಮಕ್ಕಳ ಆಯೋಗದ ಸದಸ್ಯ ಶಶಿಧರ ಕೋಸಂಬೆ ಹೇಳಿದರು.

ಶುಕ್ರವಾರ ವಿಜಯಪುರದ ಅಥಣಿ ರಸ್ತೆಯಲ್ಲಿರುವ ಖಾಸಗಿ ಆಸ್ಪತ್ರೆಯೊಂದಕ್ಕೆ ಭೇಟಿ ನೀಡಿ ಪರಿಶೀಲಿಸಿ ಮಾತನಾಡಿದ ಅವರು, ಕ್ರಮ ತೆಗೆದುಕೊಳ್ಳಲು ವಿಳಂಬ ಮಾಡಿದ್ದಲ್ಲದೇ, ಆಸ್ಪತ್ರೆ ಸೀಜ್ ಮಾಡದೇ ಕೇವಲ ಸ್ಕ್ಯಾನಿಂಗ್ ಸೆಂಟರ್ ಸೀಜ್ ಮಾಡಿರುವ ಕ್ರಮ ಸರಿಯಲ್ಲ ಎಂದು ಡಿಎಚ್‌ಓ ಅವರನ್ನು ದೂರವಾಣಿಯಲ್ಲಿ ತರಾಟೆಗೆ ತೆಗೆದುಕೊಂಡರು.

ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು ಕಳೆದ ತಿಂಗಳ ಹಿಂದಷ್ಟೇ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ಹುಲ್ಲೂರ ಗ್ರಾಮದಲ್ಲಿ ನರ್ಸ್ ಒಬ್ಬರ ಮನೆಯಲ್ಲಿ ಭ್ರೂಣ ಪತ್ತೆ ಮಾಡಲಾಗುತ್ತಿದೆ ಎನ್ನುವ ಪ್ರಕರಣ ಬೆಳಕಿಗೆ ಬಂದಿತ್ತು. ಆ ಘಟನೆ ಮಾಸುವ ಮುನ್ನವೇ ವಿಜಯಪುರ ನಗರದ ಖಾಸಗಿ ಆಸ್ಪತ್ರೆಯಲ್ಲಿ ಇಂತಹ ಪ್ರಕರಣ ನಡೆದಿದೆ. ಈಗಾಗಲೇ ಇದು ಇಲಾಖೆಯ ಗಮನಕ್ಕೆ ಬಂದಿದೆ. ಇಲಾಖೆಯ ಗಮನಕ್ಕೆ ಬಂದೂ ಕೂಡ ಒಂದು ತಿಂಗಳ ಕಾಲ ಕಳೆದಿದೆ. ಆದರೆ ಇಲಾಖೆಯವರು ಪಿಸಿಆರ್ ಮಾಡಲು ವಿಳಂಬ ಮಾಡುತ್ತಿರುವುದು ಬಹಳ ದುರ್ದೈವದ ಸಂಗತಿ. ಭ್ರೂಣ ಪತ್ತೆ ಪ್ರಕರಣಗಳು ನಡೆಯುತ್ತಿರುವುದು ನಾಗರಿಕ ಸಮಾಜ ಇಂತಹ ಆಧುನಿಕ ಯುಗದಲ್ಲಿ ಸಹ ತಲೆ ತಗ್ಗಿಸುವಂತಹ ಸಂಗತಿ. ಇದು ಇನ್ನೂ ಜೀವಂತವಾಗಿರುವುದು ಬಹಳ ನೋವಿನ ಸಂಗತಿ. ಹೀಗಾಗಿ ನಾನು ಇಂದು ಡಿಎಚ್‌ಓ ಅವರು ರಜೆಯಲ್ಲಿದ್ದಾರೆ, ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದೆ. ಕಾನೂನು ನಿಯಮಾವಳಿಗಳ ಪ್ರಕಾರ ಇಂತಹ ಪ್ರಕರಣಗಳ ಪತ್ತೆಯಾದ ನಲವತ್ತೆಂಟು ಗಂಟೆಗಳಲ್ಲಿ ಪಿಸಿಆರ್ ಮಾಡಿ ನ್ಯಾಯಾಲಯಕ್ಕೆ ವರದಿ ಸಲ್ಲಿಸಬೇಕು. ನ್ಯಾಯಾಲಯದ ಮುಖಾಂತರವೇ ಕ್ರಿಮಿನಲ್ ಪ್ರಕರಣ ದಾಖಲಾಗುತ್ತೆ. ಆದರೆ ಈ ಪ್ರಕರಣದಲ್ಲಿ ತಿಂಗಳಾದರೂ ಸಹ ಅವರು ಈ ಕೆಲಸ ಮಾಡಿಲ್ಲ. ಆ ಕಾರಣದಿಂದ ನಾವು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದಲ್ಲಿ ಸ್ವಯಂಪ್ರೇರಿತ ದೂರನ್ನ ದಾಖಲು ಮಾಡಿಕೊಳ್ಳುತ್ತಿದ್ದೇವೆ. ಜೊತೆಗೆ ಈಗಾಗಲೇ ಅವ–ರಿಗೆ ದೂರವಾಣಿಯಲ್ಲಿ ಮಾತನಾಡಿರುವಂತೆ ಸಂಜೆಯೊಳಗೆ ಕಾನೂನಿನಡಿ ಕ್ರಮ ಜರುಗಿಸಿ ಆಯೋಗಕ್ಕೆ ವರದಿ ಸಲ್ಲಿಸಲು ಸೂಚಿಸಿದ್ದೇನೆ, ಮತ್ತೆ ವಿಳಂಬ ನೀತಿ ಅನುಸರಿಸಿದರೆ ಸರಕಾರಕ್ಕೆ ಪತ್ರ ಬರೆಯುವುದಾಗಿ ತಿಳಿಸಿದ್ದೇನೆ. ಈ ಪ್ರಕರಣ ಸಾರ್ವಜನಿಕರಿಂದ ನಮ್ಮ ಇಲಾಖೆ ಮತ್ತು ಆಯೋಗಕ್ಕೆ ದೂರು ಬಂದಿದ್ದು, ಬಂದ ತಕ್ಷಣ ಸ್ಪಾಟ್ ವಿಸಿಟ್ ಮಾಡಿ ಸ್ಕ್ಯಾನಿಂಗ್ ಸೆಂಟರ್ ಸೀಜ್ ಮಾಡಿದ್ದಾರೆ. ಆದರೆ ಇಡೀ ಆಸ್ಪತ್ರೆ ಸೀಜ್ ಮಾಡಬೇಕು. ಅದನ್ನೂ ಸಹ ನಾನು ಡಿಎಚ್‌ಓ ಅವರಿಗೆ ಹೇಳಿದ್ದೇನೆ. ಕಾನೂನಿನಡಿ ಕ್ರಮ ಜರುಗಿಸಿದಾಗ ಮಾತ್ರ ಇಂತಹ ಪ್ರಕರಣ ಮರುಕಳಿಸದಂತೆ ತಡೆಗಟ್ಟಲು ಸಾಧ್ಯ. ಈ ಹಿಂದೆ ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಇಲಾಖೆಯ ಅಧಿಕಾರಿಗಳಿಗೆ ನಾನು ಸ್ಪಷ್ಟವಾಗಿ ಹೇಳಿದ್ದೇನೆ. ನಮ್ಮ ಆಯೋಗಕ್ಕೆ ಅನಾಮಧೇಯ ಕರೆಗಳು ಬಂದಿವೆ. ಆ ಕಾರಣದಿಂದ ನೀವು ಜಿಲ್ಲೆಯಲ್ಲಿರುವ ಎಲ್ಲಾ 159 ಸ್ಕ್ಯಾನಿಂಗ್ ಸೆಂಟರ್‌ಗಳನ್ನ ಯರ್ಾಂಡಮ್ ಆಗಿ ಚೆಕ್ ಮಾಡಿರಿ, ಸ್ಟಿಂಗ್ ಆಪರೇಶನ್ ಮಾಡಿ, ಇಂತಹ ಭ್ರೂಣ ಪತ್ತೆ ಪ್ರಕರಣಗಳನ್ನ ನಿಯಂತ್ರಣ ಮಾಡಿ ಎಂದು ಹೇಳಿದರೂ ಸಹ ಅವರು ಎಚ್ಚೆತ್ತುಕೊಂಡಿಲ್ಲ. ಇದು ದುರ್ದೈವದ ಸಂಗತಿ. ಇದೇ ತರಹ ಮುಂದುವರೆದರೆ ನಮ್ಮ ಆಯೋಗ ಖಂಡಿತ ಸುಮ್ಮನಿರುವುದಿಲ್ಲ. ಯಾವುದೇ ಕಾರಣಕ್ಕೂ ಅಧಿಕಾ–ರಿಗಳು ಯಾರೇ ಇದ್ದರೂ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಸರಕಾರಕ್ಕೆ ಶಿಫಾರಸ್ಸು ಮಾಡುತ್ತೇವೆ ಎಂದರು.

ಈ ವೇಳೆ ಆಯೋಗದ ಮತ್ತೋರ್ವ ಸದಸ್ಯರಾದ ಶೇಖರ್ ಗೌಡ ರಾಮತನಾಳ, ಕುಟುಂಬ ಕಲ್ಯಾಣಾಧಿಕಾರಿ ಡಾ. ರಾಜೇಶ್ವರಿ ಹಾಗೂ ಜಿಲ್ಲಾ ಆರೋಗ್ಯ ಇಲಾಖೆಯ ಅಧಿಕಾರಿಗಳು ಇದ್ದರು.

# ಚಳ್ಳೆಹಣ್ಣು ತಿನ್ನಿಸುವೆ ಬನ್ನಿ...

## ಭಾವರಶ್ಮಿ



– ಸಿದ್ಧರಾಮ ಕೂಡ್ಲಿಗಿ

("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ಮೊನ್ನೆ ತಾಲೂಕಿನ ಉಜ್ಜಿನಿಗೆ ಹೋಗಿ ಬರುವಾಗ ದಾರಿಯಲ್ಲಿ ಈ ಚಳ್ಳೆಹಣ್ಣಿನ ಗಿಡ ಕಂಡಿತು. ಗಿಡದ ತುಂಬಾ ರಸತುಂಬಿದ ಚಳ್ಳೆಹಣ್ಣುಗಳು. ಈ ಕಾಡು ಹಣ್ಣುಗಳೆಂದರೆ ನನಗೆ ತುಂಬಾ ಇಷ್ಟ. ಯಾವುದೇ ರಾಸಾಯನಿಕ ಔಷಧಿ, ಗೊಬ್ಬರ ಏನೊಂದೂ ಇಲ್ಲದೆ ತಮ್ಮಷ್ಟಕ್ಕೆ ತಾವೇ ಎಲ್ಲವನ್ನೂ ಎದುರಿಸಿ ಬೆಳೆದು ಫಲ ಕೊಡುವ ಈ ಗಿಡಗಳು ಅಪ್ಪಟ ಸಾವಯವದ ಗಿಡಗಳು.

ಒಂದೆಡೆ ಕಾರು ನಿಲ್ಲಿಸಿ ಗಿಡಕ್ಕೆ ಲಗ್ಗೆ ಇಟ್ಟೆ. ಕೈ ಹಾಕಿದಲ್ಲೆಲ್ಲ ಗೊಂಚಲು ಗೊಂಚಲು ಹಣ್ಣುಗಳು. ಹಣ್ಣುಗಳನ್ನು ಹರಿಯುತ್ತಲೇ ಬಾಯಿಗೆ ಹಾಕಿಕೊಳ್ಳುತ್ತಿದ್ದೆ. ಅಂಟಂಟು, ಸಿಹಿ, ಒಗರು ಎಲ್ಲ ಮಿಶ್ರಿತಗೊಂಡ ಇದರ ಅಂಟಂಟಾದ ಇದರ ತಿರುಳು ತಿಂದು ಬೀಜ ಉಗಿಯಲು ಹೋದರೆ ಹೊರಬರುವುದೇ ಇಲ್ಲ. ಅಷ್ಟು ಅಂಟಂಟು.

ಇದೀಗ ಚಳ್ಳೆಹಣ್ಣಿನ ಕಾಲ. ಕಾಡಿನಲ್ಲಿ ಗೊಂಚಲು ಗೊಂಚಲಾಗಿ ತೂಗಾಡುವ ಚಳ್ಳೆಹಣ್ಣನ್ನು ಇಂಗ್ಲೀಷ್‌ನಲ್ಲಿ ಬರ್ಡ್ ಲೈಮ್ ಎಂದು ಕರೆಯುತ್ತಾರೆ. ಕನ್ನಡದಲ್ಲಿಯೇ ವಿವಿಧ ಪ್ರದೇಶಗಳಲ್ಲಿ ಇದನ್ನು ಸೊಳ್ಳೆ, ಬೊಟ್ಟೆ, ಚಡ್ಲು ಎಂದು ವಿವಿಧ ಹೆಸರಿನಿಂದ ಕರೆಯಲಾಗುತ್ತದೆ. ಮೇ ತಿಂಗಳಿನಿಂದ ಜುಲೈ ತಿಂಗಳವರೆಗೂ ಚಳ್ಳೆಹಣ್ಣುಗಳ ಕಾಲ. ಚಳ್ಳೆಹಣ್ಣಿನಲ್ಲಿ ಪ್ರೋಟೀನ್, ಕಬ್ಬಿಣಾಂಶ, ಪೊಟಾಶಿಯಮ್, ಮೆಗ್ನಿಶಿಯಮ್, ಸುಣ್ಣದ ಅಂಶವಿರುತ್ತದೆ. ಈ ಕಾಯಿಯಿಂದ ಉಪ್ಪಿನಕಾಯಿ, ಸಾಂಬಾರ್ ನ್ನೂ ಮಾಡಲಾಗುತ್ತದೆ. ಮೂತ್ರವರ್ಧನೆಗೆ, ಕೆಮ್ಮಿಗೆ ಈ ಹಣ್ಣು ಉತ್ತಮ ಔಷಧ. ಗಾಯಕ್ಕೆ ಇದರ ತೊಗಟೆಯನ್ನು ತೇದು ಹಚ್ಚಬಹುದಾಗಿದೆ. ಹಣ್ಣಿನ ತಿರುಳನ್ನು ಅಂಟಿನಂತೆಯೂ ಬಳಸಲಾಗುತ್ತದೆ.

ಏಷ್ಯಾ ಮೂಲದ ಚಳ್ಳೆಗಿಡ 8–10 ಮೀ ಎತ್ತರಕ್ಕೆ ಬೆಳೆಯಬಲ್ಲದು. ತೆಳ್ಳನೆಯ ಇಳಿ ಬಿದ್ದ ರೆಂಬೆಗಳಲ್ಲಿ ಅಂಡಾಕಾರದ ಚೂಪು ತುದಿಯ ದಟ್ಟ ಹಸಿರು ಎಲೆಗಳು ಇರುತ್ತವೆ. ಚಿಕ್ಕ ಬಿಳಿ ಹೂಗೊಂಚಲು ಹಸಿರು ಕಾಯಿಗಳಿಗೆ ರೂಪಾಂತರ ಹೊಂದುತ್ತದೆ. ಹಳದಿ ಮಿಶ್ರಿತ ತಿಳಿ ಗುಲಾಬಿ ವರ್ಣದ ಹಣ್ಣಿನಲ್ಲಿ ಸುತ್ತುವರೆದ ಪಾರದರ್ಶಕ ಸಿಹಿ ಅಂಟಿನ ತಿರುಳು ತುಂಬಿರುತ್ತದೆ. ಬೀಜ ಮತ್ತು ದಂಟುಸಸಿಗಳಿಂದ ಸಸ್ಯಾಭಿವೃದ್ಧಿ ಮಾಡಬಹುದಾಗಿದೆ. ಹಕ್ಕಿ ಕೋತಿಗಳಿಂದ ಸಾಮಾನ್ಯವಾಗಿ ಇದರ ಬೀಜಪ್ರಸಾರವಾಗುತ್ತದೆ.



ಹೆಚ್ಚಾಗಿ ಯಾರ ಕಣ್ಣಿಗೂ ಬೀಳದಿರುವ ಈ ಹಣ್ಣಿನ ಮಹತ್ವ ಗೊತ್ತಾದರೆ ಅಥವಾ ಇದರಲ್ಲಿ ಔಷಧೀಯ ಅಂಶವಿದೆಯೆಂದು ವೈದ್ಯರು ಹೇಳಿದಲ್ಲಿ ಬಹುಶ: ಇದಕ್ಕೂ ಬೆಲೆ ಬರಬಹುದು. ಅಲ್ಲಿಯವರೆಗೂ ಎಲೆಮರೆಯ





ಕಾಯಿಯಂತೆ, ಈ ಹಣ್ಣುಗಳು ಎಲೆಯ ಮರೆಯಲ್ಲಿಯೇ ಉಳಿದುಬಿಡುತ್ತಿವೆ. ಇದಕ್ಕೂ ಒಂದು ಕಾಲ ಬರಬಹುದು. ಆಗ ಎಲ್ಲರೂ ಚಳ್ಳೆಹಣ್ಣಿನ ಗಿಡಗಳನ್ನು ಹುಡುಕಿ ಹಣ್ಣುಗಳನ್ನು ಮಾರಾಟ ಮಾಡಲೂಬಹುದು.

–

ಅಮೃತ ನೋನಿಯುವರ ಕಣ್ಣಿಗೆ ಇದು ಬಿದ್ದಂತಿಲ್ಲ. ಬಿದ್ದರೆ " ಚಳ್ಳೆ ನೋನಿ " ಎಂದು ಹೆಸರಿಟ್ಟು ಭರ್ಜರಿ ವ್ಯಾಪಾರ ಮಾಡಬಹುದೇನೋ ಗೊತ್ತಿಲ್ಲ. ಆಗ ಎಲ್ಲರೂ ಉಚಿತವಾಗಿ ಸಿಗುವ ಇವನ್ನೇ ನೂರಾರು ರೂ.ಗಳ ಕೊಟ್ಟು ಸೇವಿಸಿ ಟಿವಿಯಲ್ಲಿ " ನಾನು ಚಳ್ಳೆ ನೋನಿ ಉಪಯೋಗಿಸಿರುವುದರಿಂದ ನನ್ನ ಕೈಕಾಲುಗಳು ನೆಟ್ಟಗಾದವು " ಎಂದು ಹೇಳಬಹುದು.


ಈಗಿನ ಕಾಲದ ಮಕ್ಕಳಿಗೆ ಇದರ ಬಗ್ಗೆ ಹೇಳಿ ವಿವ–ರಿಸುವುದೂ ತುಂಬ ಕಷ್ಟ ಎನಿಸುತ್ತದೆ. ಬರೀ ಆಪಲ್, ಮ್ಯಾಂಗೋ, ಸ್ಟ್ರಾಬೆರಿಯಂತಹ ಹಣ್ಣುಗಳನ್ನು ತಿನ್ನುವ ಮಕ್ಕಳಿಗೆ ಇವುಗಳನ್ನು ತಿನ್ನಿಸಿದರೆ ಅವುಗಳ ಮುಖವೂ ಚಳ್ಳೆಹಣ್ಣು ತಿಂದ ಮುಖದಂತಾಗಬಹುದೇನೋ !

ಉದಯರಶ್ಮಿ ದಿನಪತ್ರಿಕೆ

## ಕಾವ್ಯರಶ್ಮಿ

–ಅನುಪಮಾ ಗಾಯತ್ರಿ.

("ನಮ್ಮ ಕಥಾ ಅರಮನೆ" ಬರಹಗಾರರು)



### ಚುಟುಕುಗಳು..

**ಹಣತೆ**


ಆರದಿರಲಿ ನೀ ಹಚ್ಚಿದ
ಪ್ರೀತಿಯ ಹಣತೆ
ನಿನ್ನಿಂದ ಹೆಚ್ಚಲಿ
ಪ್ರೇಮದ ಒರತೆ

**ಭಾವ**

ಭಾವ ,ಭಾವನೆಗಳ
ಸಮ್ಮಿಲನ ಪ್ರೇಮ
ಭಾವನೆಗಳೇ ಇಲ್ಲದೇ,
ಬಾಡಿದೆ ನನ್ನ ಪ್ರೇಮ ಕುಸುಮ..

**ಇಬ್ಬನಿ**

ವಜ್ರದ ಹರಳಂತೆ
ಹೊಳೆದಿದೆ ಇಬ್ಬನಿ ಹನಿ
ಮುತ್ತಾಗಿ ಬಂದಿದೆ
ನಿನ್ನ ನೆನಪಿನಲಿ ಕಂಬನಿ....



**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR